ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING

BAGALKOT

Volume : 07 Issue : 47 Thursday 24-10-2024 E-mail : maruti.b.hosamani76@gmail.com Page: 4 Price : Rs. 1/-

ಬಿಜೆಪಿಗೆ ಕೈ ಕಾಂಗ್ರೆಸ್‌ಗೆ ಸಿಪಿವೈ

ಬೆಂಗಳೂರು : ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದ ಮಾಜಿ ಸಚಿವ ಸಿ.ಪಿ ಯೋಗೇಶ್ವರ್ ಬಿಜೆಪಿ ತೊರೆದು ಕಾಂಗ್ರೆಸ್ ಸೇರುವ ಮೂಲಕ ಉಪಚುನಾವಣೆ ಟಿಕೆಟ್ ಕೊಡಲು ಮೀನಾ-ಮೇಷ ಎಣಿಸುತ್ತಿದ್ದ ಬಿಜೆಪಿ-ಜೆಡಿಎಸ್ ನಾಯಕರುಗಳಿಗೆ ಮರ್ಮಾಘಾತ ನೀಡಿದ್ದಾರೆ.

ಚನ್ನಪಟ್ಟಣ ವಿಧಾನಸಭಾ ಚುನಾವಣೆಯಲ್ಲಿ ಶತಾಯ-ಗತಾಯ ಗೆಲ್ಲಲೇಬೇಕು ಎಂಬ ಹಠಕ್ಕೆ ತೊಟ್ಟಿರುವ ಕೈ ನಾಯಕರು ಕೊನೆಗೂ ಸಿ.ಪಿ ಯೋಗೇಶ್ವರ್ ಅವರನ್ನು ಕಾಂಗ್ರೆಸ್‌ನತ್ತ ಸೆಳೆಯುವಲ್ಲಿ ಯಶಸ್ವಿಯಾಗಿ ಉಪಚುನಾವಣಾ ಸಮರದ ಆರಂಭದಲ್ಲೇ ಮೈತ್ರಿ ನಾಯಕರಿಗೆ ಚುರುಕು ಮುಟ್ಟಿಸಿದ್ದಾರೆ. ಮಾಜಿ ಸಚಿವ ಯೋಗೇಶ್ವರ್ ಕಾಂಗ್ರೆಸ್ ಸೇರುವ ಮೂಲಕ ಉಪ ಚುನಾವಣೆಯಲ್ಲಿ ಯಾವ ಪಕ್ಷದಿಂದ ಕಣಕ್ಕಿಳಿಯುತ್ತಾರೆ ಎಂಬ ಕುತೂಹಲಗಳಿಗೆ ಇಂದು ತೆರೆ ಬಿದ್ದಿದ್ದು, ನಾಳೆ ಅವರು ಕೈ ಅಭ್ಯರ್ಥಿಯಾಗಿ ತಮ್ಮ ನಾಮಪತ್ರ ಸಲ್ಲಿಸುವರು.

ಕಾಂಗ್ರೆಸ್ ಕಚೇರಿಯಲ್ಲಿಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸಮ್ಮುಖದಲ್ಲಿ ಯೋಗೇಶ್ವರ್ ಕಾಂಗ್ರೆಸ್ ಸೇರ್ಪಡೆಯಾಗಿದ್ದು, ಕಾಂಗ್ರೆಸ್ ಸೇರ್ಪಡೆಯಾದ ಬೆನ್ನಲ್ಲೇ ಕೈ ನಾಯಕರು ಯೋಗೇಶ್ವರ್ ಅವರಿಗೆ ಚನ್ನಪಟ್ಟಣ ಉಪಚುನಾವಣೆ ಟಿಕೆಟ್ ಘೋಷಣೆ ಮಾಡಿ ಮೈತ್ರಿ ಪಕ್ಷದ ನಾಯಕರಿಗೆ ಬಲವಾದ ಠಕ್ಕರ್ ಕೊಟ್ಟಿದ್ದಾರೆ.

ರಾತ್ರಿ ಇಡೀ ಚರ್ಚೆ, ಸಮಾಲೋಚನೆ,. ಮನವೊಲಿಕೆ

ಮಾಜಿ ಸಚಿವ ಸಿ.ಪಿ ಯೋಗೇಶ್ವರ್ ಮೊನ್ನೆ

ವಿಧಾನ ಪರಿಷತ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ ನಂತರ ಅವರನ್ನು ಕಾಂಗ್ರೆಸ್‌ಗೆ ಸೆಳೆಯುವ ಪ್ರಯತ್ನಗಳನ್ನು ಕೈ ನಾಯಕರು ನಡೆಸಿದ್ದರು. ಖುದ್ದು ಮುಖ್ಯಮಂತ್ರಿ ಸಿದ್ದರಾಮಯ್ಯರವರೇ ಯೋಗೇಶ್ವರ್ ಅವರನ್ನು ಕಾಂಗ್ರೆಸ್‌ಗೆ ಕರೆತರಲು ಆಸಕ್ತಿ ತೋರಿದ್ದರು.

ಜತೆಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಂಸದ ಡಿ.ಕೆ ಸುರೇಶ್ ಅವರು ಯೋಗೇಶ್ವರ್‌ನ್ನು ಕಾಂಗ್ರೆಸ್‌ಗೆ ಕರೆತರಲು ಎಲ್ಲ ರೀತಿಯ ಪ್ರಯತ್ನ ನಡೆಸಿದ್ದರು.

ಇದೆಲ್ಲದರ ಮಧ್ಯೆ ನಿನ್ನೆ ಸಂಜೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಯೋಗೇಶ್ವರ್ ಅವರಿಗೆ ದೂರವಾಣಿ ಕರೆ ಮಾಡಿ ದುಡುಕಬೇಡಿ ಕಾಯ್ದು ನೋಡಿ ಎಂದು ಸಲಹೆ ಮಾಡಿ ಯೋಗೇಶ್ವರ್ ಅವರಿಗೆ ಬಿಜೆಪಿ ಟಿಕೆಟ್ ಕೊಡುವ ನಿಟ್ಟಿನಲ್ಲಿ ಜೆಡಿಎಸ್

ನಾಯಕರ ಜತೆ ಚರ್ಚೆ ನಡೆಸಿದರಾದರೂ ಜೆಡಿಎಸ್ ನಾಯಕರು ಕ್ಷೇತ್ರ ಬಿಟ್ಟುಕೊಡಲು ಒಪ್ಪಲಿಲ್ಲ. ಹೀಗಾಗಿ ಯೋಗೇಶ್ವರ್ ಬಿಜೆಪಿ ಟಿಕೆಟ್ ಸಿಗುವುದಿಲ್ಲ ಎಂದು ಖಾತ್ರಿಯಾಗುತ್ತಿದ್ದಂತೆಯೇ ಕಾಂಗ್ರೆಸ್‌ನತ್ತ ಮುಖ ಮಾಡಿದರು.

ಇದನ್ನೇ ಕಾಯುತ್ತಿದ್ದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿನ್ನೆ ತಡರಾತ್ರಿಯವರೆಗೂ ಖಾಸಗಿ ಹೋಟೆಲ್‌ನಲ್ಲಿ ಯೋಗೇಶ್ವರ್ ಅವರ ಜತೆ ಉಪಚುನಾವಣೆಯ ಆಗುಹೋಗುಗಳ ಬಗ್ಗೆ ಸುದೀರ್ಘ ಚರ್ಚೆ ಮಾಡಿ ಕಾಂಗ್ರೆಸ್ ಸೇರುವಂತೆ ಯೋಗೇಶ್ವರ್ ಅವರ ಮನವೊಲಿಸುವಲ್ಲಿ ಯಶಸ್ವಿಯಾದರು.

ಸಿಎಂ ಭೇಟಿ ಆಶೀರ್ವಾದ

ಇಂದು ಬೆಳಿಗ್ಗೆಯೇ ಯೋಗೇಶ್ವರ್ ಅವರು ಸದಾಶಿವನಗರದಲ್ಲಿರುವ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರ ನಿವಾಸಕ್ಕೆ ಆಗಮಿಸಿ ಅಲ್ಲೂ ಸಹ ಕೊನೆಯ ಸುತ್ತಿನ ಮಾತುಕತೆಗಳನ್ನು ನಡೆಸಿದರು. ಅಲ್ಲಿಂದ ನೇರವಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಸಂಸದ ಡಿ.ಕೆ ಸುರೇಶ್ ಜತೆ ಮುಖ್ಯಮಂತ್ರಿಗಳ ಅಧಿಕೃತ ನಿವಾಸ ಕಾವೇರಿಗೆ ಆಗಮಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯೋಗೇಶ್ವರ್ ಅವರನ್ನು ಆದರದಿಂದ ಬರಮಾಡಿಕೊಂಡು ಹಸ್ತಲಾಘವ ಮಾಡಿ ಅವರ ಬೆನ್ನುತಟ್ಟಿ ಕಾಂಗ್ರೆಸ್ ಸೇರುತ್ತಿರುವ ಯೋಗೇಶ್ವರ್ ಅವರನ್ನು ಅಭಿನಂದಿಸಿದರು. ಯೋಗೇಶ್ವರ್ ಅವರು ಮುಖ್ಯಮಂತ್ರಿಗಳ ಕಾಲಿಗೆ ನಮಸ್ಕರಿಸಿ ಅವರ ಆಶೀರ್ವಾದ ಪಡೆದುಕೊಂಡರು.

ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಸಂಸದ ಡಿ.ಕೆ ಸುರೇಶ್, ಸಚಿವರಾದ ಜಮೀರ್‌ಅಹ್ಮದ್‌ಖಾನ್, ಶಿವರಾಜ ತಂಗಡಗಿ, ಶಾಸಕರಾದ ಉದಯ್‌ಗೌಡ, ಯತೀಂದ್ರ ಸಿದ್ದರಾಮಯ್ಯ, ಎ.ಎಸ್ ಪೊನ್ನಣ್ಣ ಸೇರಿದಂತೆ ಹಲವು ನಾಯಕರು ಉಪಸ್ಥಿತರಿದ್ದರು.

ಕಾಂಗ್ರೆಸ್ ಕಚೇರಿಯಲ್ಲಿ ಸೇರ್ಪಡೆ ಕಾರ್ಯಕ್ರಮ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾದ ಬಳಿಕ ಎಲ್ಲ ನಾಯಕರು ಕಾಂಗ್ರೆಸ್ ಕಚೇರಿಗೆ ಆಗಮಿಸಿದ್ದು, ಕಾಂಗ್ರೆಸ್ ಕಚೇರಿಯಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಸೇರಿದಂತೆ ಹಲವು ಕೈ ನಾಯಕರ ಉಪಸ್ಥಿತಿಯಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಯೋಗೇಶ್ವರ್ ಕಾಂಗ್ರೆಸ್‌ನ ಬಾವುಟ ಹಿಡಿಯುವ ಮೂಲಕ ಅಧಿಕೃತವಾಗಿ ಕಾಂಗ್ರೆಸ್‌ಗೆ ಸೇರ್ಪಡೆಯಾದರು.

ಈ ಸಂದರ್ಭದಲ್ಲಿ ಸಚಿವರಾದ ರಾಮಲಿಂಗಾರೆಡ್ಡಿ ಚಲುವರಾಯಸ್ವಾಮಿ, ಜಮೀರ್‌ಅಹ್ಮದ್‌ಖಾನ್, ಕೃಷ್ಣಬೈರೇಗೌಡ, ಡಾ.ಎಂ.ಸಿ ಸುಧಾಕರ್, ಮಾಜಿ ಸಂಸದ ಡಿ.ಕೆ ಸುರೇಶ್,ಕೆಪಿಸಿಸಿ ಕಾರ್ಯಾಧ್ಯಕ್ಷ ಹಾಗೂ ಸಂಸದ ಡಾ. ಜಿ.ಸಿ ಚಂದ್ರಶೇಖರ್, ರಾಮನಗರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಗಂಗಾಧರ್, ಶಾಸಕರುಗಳಾದ ಗೋಪಾಲಕೃಷ್ಣ ಬೇಳೂರು, ಮಾಗಡಿ ಬಾಲಕೃಷ್ಣ, ಡಾ. ಎಚ್.ಡಿ ರಂಗನಾಥ್, ರವಿಕುಮಾರ್ ಗಣಿಗ, ವಿಧಾನ ಪರಿಷತ್ ಸದಸ್ಯರುಗಳಾದ ದಿನೇಶ್‌ಗೂಳಿಗೌಡ, ಪುಟ್ಟಣ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಪುರಸಭೆ ಮುಖ್ಯಾಧಿಕಾರಿ ಗಂಗಾಧರಪ್ಪಗೆ ಸಾರ್ವಜನಿಕರಿಂದ ಛೀಮಾರಿ

ಸಿಹಿ ಕಹಿ ಸುದ್ದಿ

ಮಾನ್ವಿ : ಮಾನ್ವಿಯಲ್ಲಿ ಹೆಚ್ಚಿದ ಬಿಡಾಡಿ ದನಗಳಿಂದ ಸಾರ್ವಜನಿಕರಿಗೆ ಕಿರಿ ಕಿರಿಯುಂಟಾಗಿದ್ದು, ಪುರಸಭೆ ಮುಖ್ಯಾಧಿಕಾರಿ ಗಂಗಾಧರಪ್ಪ ಎಲ್ಲಿದ್ದೀಯಪ್ಪ ಯಾರಾದರು ಸತ್ತರೆ ನಿಮಗೆ ಖುಷಿನಾ.

ಮಾನ್ವಿ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಬಿಡಾಡಿ ದನಗಳು ಮಲಗುವುದರಿಂದ ವಾಹನ ಸಂಚಾರಕ್ಕೆ ತೊಂದರೆ-ಯಾಗಿದೆ. ಬೈಕ್ ಸವಾರರಿಗೆ ಬಿಡಾಡಿ ದನಗಳು ಗುದ್ದಿದ ಪರಿಣಾಮ ಗಾಯ ಗೊಂಡಿರುವ ಉದಾಹರಣೆ ಇವೆ.

ಪುರಸಭೆ ಮುಖ್ಯಾಧಿಕಾರಿ ಗಂಗಾಧರಪ್ಪ ಎಲ್ಲಿದ್ದೀಯಪ್ಪ ನಿಮಗೆ ಮಾನ್ವಿಯನ್ನು ಅಭಿವೃದ್ಧಿ ಮಾಡುವ ಚಿಂತನೆ ಇದೇನಾ ಅಥವಾ ಮಾನ್ವಿಯನ್ನು ದಿವಾಳಿ ಮಾಡುವ ಉದ್ದೇಶ ಇದೇನಾ ಎಂಬುದು ಬಿಡಾಡಿ ದನಗಳು ಮಾನ್ವಿ ರಸ್ತೆಗಳಲ್ಲಿ ವಾಸ ಮಾಡುತ್ತಿರುವುದೆ ಇದಕ್ಕೆ ಪ್ರಮುಖ ಕಾರಣ ವಾದಾಂತಾಗಿದೆ.

ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಹುಸೇನ್.ಭಾಷಾ.ನಕ್ಕುಂದಿ.ಮಾನ್ವಿ

ಮಹರ್ಷಿ ವಾಲ್ಮೀಕಿ ಆದರ್ಶಗಳನ್ನು ಅಳವಡಿಸಿಕೊಳ್ಳಿ

ರಬಕವಿ-ಬನಹಟ್ಟಿ : ಮಹರ್ಷಿ ವಾಲ್ಮೀಕಿ ರಚನೆ ಮಾಡಿದ ರಾಮಾಯಣ ವಿಶ್ವದ ಶ್ರೇಷ್ಠ ಮಹಾಕಾವ್ಯಗಳಲ್ಲಿ ಒಂದಾಗಿದ್ದು, ವಾಲ್ಮೀಕಿಯವರ ತತ್ವ ಸಿದ್ಧಾಂತಗಳು ಇಂದಿನ ದಿನಗಳಲ್ಲಿಯೂ ಪ್ರಸ್ತುತವಾಗಿವೆ ಎಂದು ರಬಕವಿ ಬನಹಟ್ಟಿ ತಹಶೀಲ್ದಾರ್ ಗಿರೀಶ ಸ್ವಾದಿ ತಿಳಿಸಿದರು.

ಗುರುವಾರ ಇಲ್ಲಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ ವಾಲ್ಮೀಕಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು. ನಮ್ಮ ಇಂದಿನ ಯುವಕರಿಗೆ ಮಹಾಕಾವ್ಯಗಳ ಮಹತ್ವ ಮತ್ತು ಶ್ರೇಷ್ಠತೆಯನ್ನು ತಿಳಿ ಹೇಳಬೇಕು. ರಾಮಾಯಣವು ತಾತ್ವಿಕ, ಆಧ್ಯಾತ್ಮಿಕವಾಗಿ ಮಹತ್ವವನ್ನು ಪಡೆದುಕೊಂಡಿದ್ದು, ಆಳವಾದ ಸತ್ಯವನ್ನು ಹೊಂದಿದೆ ಎಂದು ತಹಶೀಲ್ದಾರ್ ಗಿರೀಶ ಸ್ವಾದಿ ತಿಳಿಸಿದರು.

ಶಿರಸ್ತೆದಾರ ಎಸ್.ಆರ್. ಸಾತಿಹಾಳ, ಸಮಾಜ ಕಲ್ಯಾಣ ಇಲಾಖೆಯ ವಸಂತಯ್ಯ ಹಿರೇಮಠ, ಮಂಜುನಾಥ ಆಲಗೂರ, ಬಿ.ಎಮ್ ಹಳೆಮನಿ, ಸದಾಶಿವ ಕುಂಬಾರ, ಚೇತನ ಭಜಂತ್ರಿ, ರವಿ ಈಟಿ, ಕಾಶಿರಾಮ ನಾಯಕ, ಎಫ್.ಬಿ.ತಳವಾರ, ಕಾಡಪ್ಪ ಮಂಟೂರ, ಮಹಾದೇವ ತಳವಾರ, ಮಹಾದೇವ ತಳವಾರ, ಶಿವಾನಂದ ದೇಸಾಯಿ, ಸುಭಾಸ ತಳವಾರ, ಭೀಮಶಿ ತಳವಾರ, ಅಣ್ಣಾಸಾಬ ಬಾರಿಗಡ್ಡಿ, ನಾಗಪ್ಪ ತಳವಾರ, ಸುರೇಶ ವಾಲೀಕಾರ, ಹನಮಂತ ನಾಯಕ, ಪ್ರಭು ಅಮಾತ್ಯನವರ ಸೇರಿದಂತೆ ಅನೇಕರು ಇದ್ದರು.

ಕುಸ್ತಿ-ಸತೀಶ ರಾಷ್ಟ್ರಮಟ್ಟಕ್ಕೆ ಆಯ್ಕೆ

ತೇರದಾಳ : ಹಿಡಕಲ್ ಕಾಲೇಜಿನಲ್ಲಿ ವ್ಯಾಸಾಂಗ ಮಾಡುತ್ತಿರುವ ಇಲ್ಲಿನ ರೈತ ರಮೇಶ ಕಿತ್ತೂರ ಅವರ ಮಗ ಸತೀಶ ಕಿತ್ತೂರ 87 ಕೆಜಿ ರಾಜ್ಯ ಮಟ್ಟದ ಕುಸ್ತಿ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದು ರಾಷ್ಟ್ರಮಟ್ಟಕ್ಕೆ ಆಯ್ಕೆಗೊಂಡಿದ್ದಾನೆ.

ಬೆಳಗಾವಿ ಖಾನಾಪುರದಲ್ಲಿ ನಡೆದ ರಾಜ್ಯ ಮಟ್ಟದ ಪಿಯು ಕಾಲೇಜುಗಳ ಕುಸ್ತಿ ಪಂದ್ಯಾವಳಿಯಲ್ಲಿ ಭಾಗವಹಿಸಿದ ಸತೀಶ 87 ಕೆಜಿ ವಿಭಾಗದಲ್ಲಿ ಸೆಮಿಫೈನಲ್‌ಲ್ಲಿ ಮೈಸೂರಿನ ಸ್ಪರ್ಧಿಯನ್ನು 3.14 ಪಾಯಿಂಟ್‌ಗಳಿಂದ ಹಾಗೂ ಫೈನಲ್ ಪಂದ್ಯದಲ್ಲಿ ರಾಮನಗರದ ಸ್ಪರ್ಧಿಯನ್ನು 0.10 ಪಾಯಿಂಟ್‌ಗಳಿಂದ ಸೋಲಿಸಿ ರಾಷ್ಟ್ರಮಟ್ಟಕ್ಕೆ ಆಯ್ಕೆಗೊಂಡಿದ್ದಾನೆ. ತೇರದಾಳ ಅಲ್ಲಮಪ್ರಭು ಕುಸ್ತಿ ತಾಲೀಮ ಕಮೀಟಿ ಹಾಗೂ ಕೋಚ್ ಜಿಡ್ಡಿಮನಿ ಸತೀಶನನ್ನು ಅಭಿನಂದಿಸಿದ್ದಾರೆ.

ನೇಕಾರ ನಾಡಿನಲ್ಲಿ ಹುಣ್ಣಿಮೆ ಸಂಭ್ರಮ

ರಬಕವಿ-ಬನಹಟ್ಟಿ : ನೇಕಾರಿಕೆ ಪ್ರಧಾನ ಕ್ಷೇತ್ರವಾಗಿರುವ ರಬಕವಿ-ಬನಹಟ್ಟಿ ತಾಲೂಕಿನಲ್ಲಿ ಭೂಮಿ ಹುಣ್ಣಿಮೆಯ ಹಬ್ಬದ ಸಡಗರ ಮನೆ ಮಾಡಿತ್ತು. ರೈತಾಪಿ ವರ್ಗ ಸೀಗಿ ಹುಣ್ಣಿಮೆ ಹಬ್ಬವನ್ನು ಇಂದು ಸಂಭ್ರಮದಿಂದ ಆಚರಣೆ ಮಾಡಿದರು. ಭೂತಾಯಿ ಈ ಸಮಯದಲ್ಲಿ ಗರ್ಭಿಣಿಯಂತೆ ಬೆಳೆಗಳಿಂದ ಮೈತುಂಬಿಕೊಂಡಿರುತ್ತಾಳೆ ಎಂಬ ಪ್ರತೀತಿಯಿಂದ ಗರ್ಭಿಣಿಯ ಸ್ಥಾನದಲ್ಲಿಟ್ಟು ಸೀಮಂತದ ಸಂಭ್ರಮದಂತೆ ರೈತರು ಪೂಜೆ ಸಲ್ಲಿಸುವ ಮೂಲಕ ವಿವಿಧ ರೀತಿಯ ತಿಂಡಿ-ತಿನಿಸುಗಳನ್ನು ತಯಾರಿಸಿ ಭೂಮಿ ತಾಯಿಗೆ ಅರ್ಪಣೆ ಮಾಡಿ ನಂತರ ಹೊಲದಲ್ಲೇ ರೈತ ಕುಟುಂಬ ಸಾಮೂಹಿಕ ಊಟ ಮಾಡುತ್ತಿರುವದು ಸಾಮಾನ್ಯವಾಗಿತ್ತು. ಮಳೆಯ ನಡುವೆಯೂ ಹಬ್ಬದ ಸಂಭ್ರಮ ಜೋರಾಗಿತ್ತು.

ಮಹಾನವಮಿ ಹಾಗು ವಿಜಯದಶಮಿ ಕಳೆದು ಐದನೇ ದಿನ ಬರುವ ಹುಣ್ಣಿಮೆಯೇ ಸೀಗಿ ಹುಣ್ಣಿಮೆ.

ಈ ದಿನ ಎಲ್ಲ ರೈತ ಕುಟುಂಬಗಳು ಭೂಮಿಯಲ್ಲಿಯೇ ಇದ್ದು ವಿಶೇಷ ಪೂಜೆಯೊಂದಿಗೆ ಒಳ್ಳೆಯ ಫಸಲು ನೀಡು ಎಂದು ಬೇಡಿಕೊಳ್ಳಲಾಗುತ್ತದೆ. ಇಷ್ಟು ವರ್ಷಗಳ ಕಾಲ ಅನ್ನವನ್ನು ನೀಡಿದ್ದಕ್ಕೆ ಧನ್ಯವಾದ ಅರ್ಪಿಸಲಾಗುತ್ತದೆ.

ಪೂಜೆ ನಂತರ ಕುಟುಂಬದವರೆಲ್ಲರೂ ಒಟ್ಟಿಗೆ ಸೇರಿ ತಮ್ಮ ಜಾಗದಲ್ಲಿ ಕುಳಿತು ಊಟ ಮಾಡುತ್ತಾರೆ.

ಅರುಣ ಖಾನಾಪುರಗೆ ಪಿಎಚ್.ಡಿ

ಬೀಳಗಿ : ತಾಲೂಕಿನ ಚಿಕ್ಕಾಲಗುಂಡಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಾಣಿಜ್ಯಶಾಸ್ತ್ರ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ, ಅರುಣ ಮಾರುತಿ ಖಾನಾಪೂರ ಅವರಿಗೆ ಹಂಪಿಯ ಕನ್ನಡ ವಿಶ್ವವಿದ್ಯಾಲಯವು ಪಿಹೆಚ್.ಡಿ ಪದವಿ ನೀಡಿದೆ.

"ಸಹಕಾರಿ ಬ್ಯಾಂಕುಗಳ ವ್ಯವಹಾರ ನಿರ್ವಹಣೆ : ಸಿದ್ಧಾಂತ ಮತ್ತು ಆಚರಣೆ" ಎಂಬ ವಿಷಯದ ಮೇಲೆ ವಿಶ್ರಾಂತ ಸಹ ಪ್ರಾಧ್ಯಾಪಕ ಡಾ. ಮೇಘಾವತ ಗೋವಿಂದನಾಯ್ಕ ಇವರ ಮಾರ್ಗದರ್ಶನದಲ್ಲಿ ಮಹಾಪ್ರಬಂಧ ಮಂಡಿಸಿದ್ದರು.

ಪಿಎಚ್.ಡಿ ಪದವಿಗೆ ಭಾಜನರಾದ ಡಾ. ಅರುಣ ಮಾರುತಿ ಖಾನಾಪುರ ಅವರನ್ನು ಪ್ರಾಚಾರ್ಯರಾದ ಡಾ. ಸಿದ್ಧರಾಮ ಬಂಗಾರಿ, ಸಿಬಿಸಿ ಉಪಾಧ್ಯಕ್ಷ ಬಾಬು ಕಂಪ್ಲಿಂಗಣ್ಣವರ ಮತ್ತು ಸರ್ವ ಸದಸ್ಯರು ಹಾಗೂ ಸಿಬ್ಬಂದಿಯವರು ಅಭಿನಂದಿಸಿದ್ದಾರೆ.

ರಬಕವಿ ಬನಹಟ್ಟಿ ಭಾರತೀಯ ಜನತಾ ಪಕ್ಷದ ಕಾರ್ಯಾಲಯದಲ್ಲಿ ವಾಲ್ಮೀಕಿ ಜಯಂತ್ಯುತ್ಸವದ ಅಂಗವಾಗಿ ವಾಲ್ಮೀಕಿ ಭಾವಚಿತ್ರಕ್ಕೆ ನಗರದ ಘಟಕದಅಧ್ಯಕ್ಷ ಶ್ರೀಶೈಲ ಬೀಳಗಿ ಪೂಜೆ ಸಲ್ಲಿಸಿದರು.

ರಬಕವಿ ಬನಹಟ್ಟಿ ನಗರಸಭೆಯ ಅಧ್ಯಕ್ಷೆ ವಿದ್ಯಾ ಧಬಾಡಿ, ಸ್ಥಾಯಿ ಸಮಿತಿ ಕಾರ್ಯಾಧ್ಯಕ್ಷ ಅರುಣ ಬುದ್ನಿ, ಸುರೇಶ ಅಕ್ಕಿವಾಟ, ಧರೆಪ್ಪ ಉಳ್ಳಾಗಡ್ಡಿ, ಆನಂದ ಕಂಪು, ಶಂಕರ ಹುನ್ನೂರ, ಗೌರಿ ಮಿಳ್ಳಿ, ಪವಿತ್ರಾ ತುಕ್ಕನ್ನವರ, ಶಶಿಕಲಾ ಸಾರವಾಡ, ದೀಪಾ ಕೊಣ್ಣೂರ ಸೇರಿದಂತೆ ಅನೇಕರು ಇದ್ದರು.

ತೇರದಾಳದಲ್ಲಿ ದುಶ್ಚಟಗಳ ಭಿಕ್ಷೆ ಆರಂಭಿಸಿದ ಶ್ರೀಗಳು

ಕಾಡಿ ಬೇಡಿ ಪಡೆದ ಹಣವನ್ನು ಶ್ರೀಗಳ ಜೋಳಿಗೆಗೆ ಹಾಕಿದ ಅಲ್ಲವ್ವ!

ತೇರದಾಳ : ಅಲ್ಲಮಪ್ರಭುದೇವರ ದೇವಸ್ಥಾನಕ್ಕೆ ಬರುವ ಭಕ್ತಾಧಿಗಳ ಹತ್ತಿರ ಪ್ರೀತಿಯಿಂದ ಕಾಡಿ ಬೇಡಿ ಪಡೆದ ಹಣವನ್ನು ಶ್ರೀಗಳ ಜೋಳಿಗೆಗೆ ಹಾಕುವ ಮೂಲಕ ಮಹಿಳೆಯೊಬ್ಬಳು ಭಕ್ತಿ ಪರಾಕಾಷ್ಠೆಗೆ ಸಾಕ್ಷಿಯಾಗಿದ್ದಾಳೆ.

ಹೌದು. ಅಲ್ಲಮಪ್ರಭುದೇವರ ನೂತನ ದೇವಸ್ಥಾನ ಲೋಕಾರ್ಪಣೆ ನಿಮಿತ್ತ ಶೇಗುಣಸಿ ವಿರಕ್ತಮಠದ ಡಾ. ಮಹಾಂತಪ್ರಭು ಶ್ರೀ ಹಾಗೂ ಸ್ಥಳೀಯ ಹಿರೇಮಠದ ಗಂಗಾಧರ ದೇವರು ಪ್ರಭು ಪರಮಜ್ಯೋತಿಯೊಂದಿಗೆ ಸದ್ಗುಗಳ ಧೀಕ್ಷೆ, ದುಶ್ಚಟಗಳ ಭಿಕ್ಷೆ ಕಾರ್ಯಕ್ರಮಕ್ಕೆ ಗುರುವಾರ ಅಲ್ಲಮಪ್ರಭು ದೇವಸ್ಥಾನದಿಂದ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಇಲ್ಲಿನ ಕ್ಷೇತ್ರಾಧಿಪತಿ ಅಲ್ಲಮಪ್ರಭು ದೇವಸ್ಥಾನದಲ್ಲಿ ಭಕ್ತರ ಹತ್ತಿರ ಪ್ರೀತಿಯಿಂದಲೇ ನಿಮಗೆ ಗಂಡು ಮಗು ಆಗುತ್ತದೆ, ನೀನು ಪರೀಕ್ಷೆಯಲ್ಲಿ ಪಾಸು ಆಗಿತ್ತಿ, ಇವತ್ತು ನಿಮಗೆ ಒಳ್ಳೆ ವ್ಯಾಪಾರ ಆಗುತ್ತೆ ಅಂತ ಹೀಗೆ ತನ್ನ ತೊದಲು ಮಾತುಗಳನ್ನು ಆಡುತ್ತ ಒಂದೊಂದು ರೂಪಾಯಿ ಪಡೆದುಕೊಳ್ಳುತ್ತಿದ್ದ ಅಲ್ಲವ್ವ ಕಳಾವಂತ(ಪಾತ್ರದಾರ) ತನ್ನ ಬಳಿ ಸಂಗ್ರಹವಾಗಿದ್ದ ಸುಮಾರು 5 ರಿಂದ 6 ಸಾವಿರ ಹಣವನ್ನು ಶ್ರೀಗಳ ಜೋಳಿಗೆಗೆ ಹಾಕುವ ಮೂಲಕ ಹಣವನ್ನು ದೇವಸ್ಥಾನ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಬಳಸಿಕೊಳ್ಳುವಂತೆ ಶ್ರೀಗಳಿಗೆ ಹೇಳಿ ಇತರರಿಗೆ ಮಾದರಿ ಆಗಿರುವುದು ಒಂದಡೆಯಾದರೆ ತನ್ನಲ್ಲಿನ ಭಕ್ತಿಯ ಪರಾಕಾಷ್ಠೆ ತೋರಿಸಿದ್ದು ಇನ್ನೊಂದಡೆಯಾಗಿದೆ. ಪ್ರಭುದೇವರ ದೇವಸ್ಥಾನದಿಂದ ಪ್ರಾರಂಭಗೊಂಡ ಪಾದಯಾತ್ರೆ, ದ್ವಾರ ಬಾಗಿಲು ಮುಖಾಂತರ ಕಲ್ಲಟ್ಟಿ ಗಲ್ಲಿ ಗಂಗಾಧರ ಮಠದವ

ಭಾರತೀಯ ಅಂಚೆ ಸೇವೆ ದೇಶದ ಅವಿಭಾಜ್ಯ ಅಂಗ:ಸಂತೋಷ ಬಂಡೆ

ವಿಜಯಪುರ : ಭಾರತೀಯ ಅಂಚೆ ಸೇವೆ ದೇಶದ ಅವಿಭಾಜ್ಯ ಅಂಗವಾಗಿದ್ದು, ಇದು ವಿಶ್ವದಲ್ಲೇ ಅತಿ ದೊಡ್ಡದಾದ ಸಂಪರ್ಕ ಜಾಲವನ್ನು ಹೊಂದಿದೆ. ತಂತ್ರಜ್ಞಾನ ಬೆಳೆದಂತೆ ಇಂದಿನ ಜನರು ಅಂಚೆ ಸೇವೆಗಳ ಬಳಕೆಯನ್ನು ಕಡಿಮೆ ಮಾಡಿದ್ದು ಕಳವಳಕಾರಿಯಾಗಿದೆ ಎಂದು ಶಿಕ್ಷಕ ಸಾಹಿತಿ ಸಂತೋಷ ಬಂಡೆ ಹೇಳಿದರು.

ನಾಗಠಾಣ ಗ್ರಾಮದ ಅಂಚೆ ಕಚೇರಿಯಲ್ಲಿ ಹಮ್ಮಿಕೊಂಡ ರಾಷ್ಟ್ರೀಯ ಅಂಚೆ ದಿನ ವನ್ನು ಉದ್ದೇಶಿಸಿ ಮಾತನಾಡಿದರು.

ಪ್ರಪಂಚದಾದ್ಯಂತ ಜನರ ದೈನಂದಿನ ಜೀವನದಲ್ಲಿನ ವ್ಯವಹಾರ, ಸಾಮಾಜಿಕ, ಆರ್ಥಿಕ ಅಭಿವೃದ್ಧಿಯಲ್ಲಿ ಅಂಚೆ ಇಲಾಖೆಯ ಪಾತ್ರದ ಬಗ್ಗೆ ಜನರಿಗೆ ಅರಿವು ಮೂಡಿಸಿ,

ಗ್ರಾಮೀಣ ಅಂಚೆ ಜೀವ ವಿಮೆಯಂತಹ ಮಾಹಿತಿ ಎಲ್ಲರಿಗೂ ವ್ಯಾಪಕವಾಗಿ ತಿಳಿಸುವ ಅಗತ್ಯವಿದೆ ಎಂದು ಹೇಳಿದರು.

ಸಾರ್ವಜನಿಕ ಯೋಜನೆಗಳನ್ನು ಸುಲಭಗೊಳಿಸುವಲ್ಲಿ ಅಂಚೆ ಸೇವೆಗಳ ಪಾತ್ರ ಅನನ್ಯ.ಪ್ರಪಂಚದ ನಾನಾ ಭಾಗಗಳ ಜನತೆ, ಸಂಸ್ಥೆಗಳ ನಡುವಿನ ಸಂಪರ್ಕಕ್ಕೆ ಅತ್ಯಂತ ಹಳೆಯ ಸಾಧನವಾಗಿ ಅಂಚೆ ಸೇವೆಗಳು ಇಂದಿಗೂ ಪ್ರಸ್ತುತವಾಗಿವೆ

ಎಂದು ಹೇಳಿದರು.

ಶಾಖಾ ಅಂಚೆ ಅಧಿಕಾರಿ ಹಣಮಂತ ಅರಕೇರಿ ಮಾತನಾಡಿ, ಅಂಚೆ ಇಲಾಖೆ ಉತ್ತಮ ಗ್ರಾಹಕ ಸ್ನೆಹಿಯಾಗಿದ್ದು, ಇದು ಸುಕನ್ಯಾ ಸಮೃದ್ಧಿ ಯೋಜನೆ ಮತ್ತು ಪಿಂಚಣಿ ಸೌಲಭ್ಯಗಳ ಅಡಿಯಲ್ಲಿ ವೇತನ ವಿತರಣೆಯಂತಹ ಸೇವೆಯ ಜತೆಗೆ ಸಂಧ್ಯಾ ಸುರಕ್ಷಾ ಯೋಜನೆ, ವಿಧವಾ ವೇತನ, ವಿಶೇಷಚೇತನ ಗ್ರಾಹಕರಿಗೆ ಮತ್ತಷ್ಟು ಸವಲತ್ತುಗಳನ್ನು ಒದಗಿಸುವ ಮೂಲಕ ದೇಶದ ವ್ಯವಸ್ಥೆಯಲ್ಲಿ ಬಹುಮುಖ್ಯ ಪಾತ್ರ ವಹಿಸಿದೆ ಎಂದು ಹೇಳಿದರು.

ಸಹಾಯಕ ಅಂಚೆ ಅಧಿಕಾರಿ ಪ್ರಸಾದ ನಾಯ್ಕೋಡಿ, ಯುವ ಮುಖಂಡ ರಾಜು ಕತ್ನಳ್ಳಿ, ಪಿಕೆಪಿಎಸ್ ನಿರ್ದೇಶಕ ಪ್ರಭಾಕರ ಅರಕೇರಿ, ಗ್ರಾಮಸ್ಥರಾದ ಚನ್ನಯ್ಯ ನಂದಿಕೋಲ,ಶ್ರೀಕಾಂತ ಗುಜ್ಜಲಕರ, ಕಾಶೀನಾಥ ಬಡಿಗೇರ, ಶರಣಪ್ಪ ಬಂಥನಾಳ, ಸಂತೋಷ ಸಂಗೋಗಿ, ಮಲ್ಲಿಕಾರ್ಜುನ ಸಮಗೊಂಡ, ಶರಣಪ್ಪ ಕತ್ನಳ್ಳಿ, ಕಲ್ಲಪ್ಪ ವಾಲೀಕಾರ, ಶಂಕ್ರೆಪ್ಪ ಅರಕೇರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಶಾಖಾ ಅಂಚೆ ಅಧಿಕಾರಿ ಹಣಮಂತ ಅರಕೇರಿ ಅವರನ್ನು ಸನ್ಮಾನಿಸಲಾಯಿತು.

ಪಂಚಾಯತ ನೌಕರರ ಅನಿರ್ದಿಷ್ಟ ಮುಷ್ಕರ

ವಿಜಯಪುರ : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆಯ ಅಧಿಕಾರಿಗಳು, ನೌಕರರ ಎಲ್ಲ ವೃಂದ ಸಂಘಗಳ ಹಾಗೂ ಗ್ರಾಮ ಪಂಚಾಯತಿ ಸದಸ್ಯರ ಒಕ್ಕೂಟದ ಜಿಲ್ಲಾ ಶಾಖೆ ನೇತೃತ್ವದಲ್ಲಿ ವಿಜಯಪುರ ಜಿ.ಪಂ. ಕಚೇರಿ ಎದುರು ಕೈಗೊಂಡ ಅನಿರ್ದಿಷ್ಟ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಭೇಟಿ ನೀಡಿ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದ ನಾಗಠಾಣ ಶಾಸಕ ವಿಠಲ ಕಟಕದೊಂಡ ಅವರಿಗೆ ಪಂಚಾಯತ ನೌಕರರು ಮನವಿ ಸಲ್ಲಿಸಿದರು.

ವಿದ್ಯುನ್ಮಾನ ಮಾದರಿಯ ಥೀಮ್‌ಪಾರ್ಕ

ಚನ್ನಮ್ಮನ ಕಿತ್ತೂರು: ಕಿತ್ತೂರು ಕೋಟೆ ಪ್ರವಾಸಿ ತಾಣವಾಗಿಸುವ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ರೂಪಿಸಲಾಗಿದೆ. ರೂ.30 ಕೋಟಿ ಅನುದಾನದಡಿಯಲ್ಲಿ ಹೊಸ ತಂತ್ರಜ್ಞಾನ ಬಳಕೆಯ ಮೂಲಕ ವಿದ್ಯುನ್ಮಾನ ಮಾದರಿಯ ಉದ್ಯಾನವನ (ಥೀಮ್‌ಪಾರ್ಕ) ನಿರ್ಮಾಣ ಮಾಡ ಲಾಗುವುದೆಂದು ಕಂದಾಯ ಇಲಾಖೆ ಸಚಿವ ಕೃಷ್ಣಭೈರೇಗೌಡ ಹೇಳಿದರು.

ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಹಾಗೂ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಮೈಸೂರ ಇವರ ಸಂಯುಕ್ತ ಆಶ್ರಯದಲ್ಲಿ ಕೋಟೆ ಆವರಣದಲ್ಲಿ ನಡೆದ ಚನ್ನಮ್ಮನ ಕೋಟೆ ಅರಮನೆ ಸಂರಕ್ಷಣಾ ಕಾಮಗಾರಿ, ಭೂಮಿ ಪೂಜೆ ಹಾಗೂ ಶಂಕುಸ್ಥಾಪನೆ ಸಮಾರಂಭದಲ್ಲಿ ಮಾತನಾಡಿ ಕೋಟೆ ಮುಂಭಾಗದ ಮಹಾದ್ವಾರ, ಗೋಡೆ ಸೇರಿದಂತೆ ವಿವಿಧ ಅವಶೇಷಗಳನ್ನು ರಕ್ಷಿಸಲು 12.11 ಕೋಟಿ ಹಾಗೂ ಇನ್ನಿತರ ಕಾಮಗಾರಿಗಳಿಗೆ 2.4 ಕೋಟಿ ಅನುದಾನ ಬಳಕೆಯಾಗಲಿದೆ ಎಂದರು.

ಶಾಸಕ ಬಾಬಾಸಾಹೇಬ ಪಾಟೀಲ ಅವರು ಕ್ಷೇತ್ರದ ಹಾಗೂ ಕೋಟೆ ಅಭಿವೃ ದ್ಧಿಗಾಗಿ ವಿಶೇಷ ಆಸಕ್ತಿವಹಿಸಿ ಮುಖ್ಯಮಂತ್ರಿ ಹಾಗೂ ನಮ್ಮ ಮೇಲೆ ಒತ್ತಡ ಹೇರಿ ಹೆಚ್ಚಿನ ಅನುದಾನ ಪಡೆದುಕೊಳ್ಳುವಲ್ಲಿ ಯಶಸ್ಸು ಕಂಡಿದ್ದಾರೆ. ಅದ್ದೂರಿಯಿಂದ ಉತ್ಸವ ಆಚರಿಸಲಾಗುವುದುದೆಂದು ತಿಳಿಸಿದರು.

ಕೋಟೆ ಕೆಲಭಾಗ ಶಿಥೀಲಗೊಂಡಿದ್ದು ದುರಸ್ತಿ ಅಗತ್ಯವಿದೆ. ಕುಸಿದ ಗೋಡೆ ಯನ್ನು ನವೀಕರಿಸಿ ಅವಶೇಷಗಳ ರಕ್ಷಣೆಯ ಮೂಲಕ ಇತಿಹಾಸ ಉಳಿಸುವ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. ಪುರಾತತ್ವ ಇಲಾಖೆ ಸಂಯೋಗದೊಂದಿಗೆ ಕೋಟೆ ದುರಸ್ತಿಗೆ ಟೆಂಡರ್ ಕರೆಯಲಾಗಿದ್ದು ಮೂಲ ಪದ್ಧತಿ ಅನುಸರಿಸಿ ದುರಸ್ತಿ ಪಡಿಸಲಾಗುವುದು ಎಂದು ಸಚಿವರು ಮಾಹಿತಿ ನೀಡಿದರು.

ಈಗಾಗಲೇ ಸರಕಾರ ಹಲವಾರು ಬಾರಿ ಯೋಚಿಸಿದೆ. ಅರಮನೆಯ ಮೂಲ ವಿನ್ಯಾಸದ ಮಾಹಿತಿ ಕೊರತೆ ಇದ್ದ ಕಾರಣ ಮರು ನಿರ್ಮಾಣ ವಿಳಂಬ ವಾಗಿದ್ದು ಸದ್ಯಕ್ಕೆ ಅವಶೇಷಗಳ ರಕ್ಷಣೆಗೆ ತ್ವರಿತವಾಗಿ ಈ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಉದ್ಯಾನವನ ಅಭಿವೃದ್ಧಿಯೊಂದಿಗೆ ಕೋಟೆ ಸ್ವಚ್ಛತೆಪ ಡಿಸಲಾಗುವುದು. 3 ಕೋಟಿ ವೆಚ್ಚದಲ್ಲಿ ರಾಣಿಚನ್ನಮ್ಮ ಸ್ಮಾರಕಭವನ ನಿರ್ಮಾಣ ಹಂತದಲ್ಲಿ ಒಟ್ಟು 18 ಕೋಟಿ ರೂ. ಅನು ದಾನದಡಿಯಲ್ಲಿ ಹಲವಾರು ಕಾಮಗಾರಿಗಳು ಪ್ರಗತಿಯಲ್ಲಿವೆ.

ಉತ್ತರ ಕರ್ನಾಟಕದಲ್ಲಿ ಕಿತ್ತೂರು ಭಾಗವನ್ನು ದೊಡ್ಡ ಪ್ರವಾಸಿ ತಾಣವಾ ಗಿಸಲು ಅನೇಕ ಯೋಜನೆಗಳನ್ನು ರೂಪಿಸಲಾಗಿದೆ. 30 ಕೋಟಿ ಅನುದಾನ ಅಡಿಯಲ್ಲಿ ಚನ್ನಮ್ಮನ ಇತಿಹಾಸ ಕುರಿತು ಇಂದಿನ ಯುವಪಿಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಸದ್ಯದಲ್ಲಿ ಟೆಂಡರ್ ಕರೆಯ ಲಾಗಿದೆ. ಇತಿಹಾಸ ಅರಿಯದೇ ಭವಿಷ್ಯ ದಲ್ಲಿ ಅಭಿವೃದ್ಧಿ ಸಾಧ್ಯವಿಲ್ಲ ಹೇಳಿದರು.

ಅಧ್ಯಕ್ಷತೆವಹಿಸಿ ಶಾಸಕ ಬಾಬಾಸಾಹೇಬ ಪಾಟೀಲ ಮಾತನಾಡಿ ಮುಖ್ಯಮಂತ್ರಿಯವರು ಈ ಭಾಗದ ಅಭಿವೃದ್ಧಿಗೊಸ್ಕರ ಸಾಕಷ್ಟು ಹಣ ಬಿಡುಗಡೆಗೊಳಿಸಿದ್ದು ಅವರಿಗೆ ಈ ಭಾಗದ ಜನತೆಯ ಪರವಾಗಿ ಅಭಿನಂದನೆ ತಿಳಿಸಿದರು. ಈಗಾಗಲೇ ಹಲವಾರು ಯೋಜನೆಗಳನ್ನು ರೂಪಿಸಿ ಮಾದರಿ ಉದ್ಯಾನವನ ನಿರ್ಮಾಣ ಮಾಡಲಾಗುವುದು. ಕಿತ್ತೂರಿನ ಅವಶೇಷಗಳನ್ನು ರಕ್ಷಿಸಿ ಇದರ ಇತಿಹಾಸ ಯುವಪಿಳಿಗೆಗೆ ಪರಿಚಯಿಸಲಾಗುವುದು ಮುಂದಿನ ದಿನಗಳಲ್ಲಿ ಪ್ರಾಧಿಕಾರದಿಂದ ಹೆಚ್ಚಿನ ಅಭಿವೃದ್ಧಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದೆಂದರು.

ಈ ವೇಳೆ ಮಡಿವಾಳ ರಾಜಯೋಗೀಂದ್ರ ಸ್ವಾಮಿಜೀ ಸಂಸ್ಥಾನ ಕಲ್ಮಠ ಕಿತ್ತೂರು, ನಿಚ್ಚಣಕಿಯ ಮಡಿವಾಳೇಶ್ವರ ಮಠ ಪಂಚಾಕ್ಷರಿ ಸ್ವಾಮಿಜೀ, ಜಿಲ್ಲಾಧಿಕಾರಿ ಮೊಹಮ್ಮದ ರೋಶನ್, ಜಿಲ್ಲಾ ಪೋಲಿಸ್ ವರಿಷ್ಠ ಡಾ. ಭೀಮಾಶಂಕರ ಗುಳೇದ, ಪ್ರಾಧಿಕಾರ ಆಯುಕ್ತೆ ಉಪವಿಭಾಗಾಧಿಕಾರಿ ಪ್ರಭಾವತಿ ಫಕ್ಕೀರಪುರ, ತಹಶೀಲ್ದಾರ ರವೀಂದ್ರ ಹಾದಿಮನಿ, ತಾಪಂ ಇಓ ಕಿರಣ ಗೋರ್ಘಡೆ, ಬಿಇಓ ಚನ್ನಬಸಪ್ಪ ತುಬಾಕಿ, ಪಿಡಬ್ಲೂಡಿ ಎಇಇ ಸಂಜೀವ ಮಿರಜಕರ, ಕ್ಯೂರೇಟರ್ ರಾಘವೇಂದ್ರ, ರೋಹಿಣಿ ಪಾಟೀಲ, ನಾನಾಸಾಬ ಪಾಟೀಲ, ಅಶಪಾಕ ಹವಾಲ್ದಾರ, ಸುನೀಲ್ ಘೀವಾರಿ ಕೃಷ್ಣಾ ಬಾಳೇಕುಂದ್ರಗಿ, ಮುದಕಪ್ಪ ಮರಡಿ, ಅನಿಲ್ ಎಮ್ಮಿ, ಸಿ.ಬಿ. ಪಾಟೀಲ, ಸಾಗರ ದೇಸಾಯಿ, ಚನ್ನಗೌಡ ಪಾಟೀಲ, ತಹಶೀಲ್ದಾರ ಕಚೇರಿ ಸಿಬ್ಬಂದಿ, ಸೇರಿದಂತೆ ರಾಣಿ ಚನ್ನಮ್ಮ ಅಭಿಮಾನಿ ಬಳಗ, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಪಾಲ್ಗೋಂಡಿದ್ದರು. ಶಿಕ್ಷಕ ವಿವೇಕ ಕುರಗುಂದ ನಿರೂಪಿಸಿದರು.

"ಕಲಾಂ ಅವರ ಜೀವನ ಚರಿತ್ರೆ"

ಎಪಿಜೆ ಅಬ್ದುಲ್ ಕಲಾಂ (ಜನನ ಅಕ್ಟೋಬರ್ 15, 1931, ರಾಮೇಶ್ವರಂ , ಭಾರತ–ಮರಣ ಜುಲೈ 27, 2015, ಶಿಲ್ಲಾಂಗ್) ಒಬ್ಬ ಭಾರತೀಯ ವಿಜ್ಞಾನಿ ಮತ್ತು ರಾಜಕಾರಣಿಯಾಗಿದ್ದು, ಅವರು ಭಾರತದ ಕ್ಷಿಪಣಿ ಮತ್ತು ಪರಮಾಣು ಶಸ್ತ್ರಾಸ್ತ್ರಗಳ ಕಾರ್ಯಕ್ರಮಗಳ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ . ಅವರು 2002 ರಿಂದ 2007 ರವರೆಗೆ ಭಾರತದ ಅಧ್ಯಕ್ಷರಾಗಿದ್ದರು . ಅವರ ವೈಜ್ಞಾನಿಕ ಸಾಧನೆಗಳು ಮತ್ತು ಜನಪ್ರಿಯತೆಯು ಅವರಿಗೆ "ಮಿಸೈಲ್ ಮ್ಯಾನ್" ಮತ್ತು "ಪೀಪಲ್ಸ್ ಪ್ರೆಸಿಡೆಂಟ್" ಎಂಬ ಶೀರ್ಷಿಕೆಗಳನ್ನು ತಂದುಕೊಟ್ಟಿತು .

ಆರಂಭಿಕ ಜೀವನ ಮತ್ತು ವೃತ್ತಿಜೀವನ

ಕಲಾಂ ತಮಿಳುನಾಡು ರಾಜ್ಯದ ಪಟ್ಟಣದಲ್ಲಿ ಒಂದು ಕಾಲದಲ್ಲಿ ಶ್ರೀಮಂತ ಕುಟುಂಬದಿಂದ ಮೀನುಗಾರಿಕಾ ದೋಣಿ ಮಾಲೀಕರಿಗೆ ಜನಿಸಿದರು. ಐವರು ಒಡಹುಟ್ಟಿದವರಲ್ಲಿ ಕಿರಿಯವರಾದ ಕಲಾಂ ಅವರು ತಮ್ಮ ಬಡ ಪರಿಸ್ಥಿತಿಗಳಹೊರತಾಗಿಯೂತಮ್ಮಶಿಕ್ಷಣವನ್ನು ಮುಂದುವರಿಸಿದರು. ಅವರು ಮದ್ರಾಸ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಿಂದ ಏರೋನಾಟಿಕಲ್ ಎಂಜಿನಿಯರಿಂಗ್ನಲ್ಲಿ ಪದವಿ ಪಡೆದರು ಮತ್ತು 1958 ರಲ್ಲಿ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ (ಡಿಆರ್ಡಿಒ) ಸೇರಿದರು. 1969 ರಲ್ಲಿ ಅವರು ಸ್ಥಳಾಂತರಗೊಂಡರುಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ISRO), ಅಲ್ಲಿ ಅವರು ಯೋಜನಾ ನಿರ್ದೇಶಕರಾಗಿದ್ದರು SLV-III , ಮೊದಲ ಉಪಗ್ರಹ ಉಡಾವಣಾ ವಾಹನವಾಗಿದ್ದು , ಇದನ್ನು ಭಾರತದಲ್ಲಿ ವಿನ್ಯಾಸಗೊಳಿಸಲಾಗಿದೆ ಮತ್ತು ಉತ್ಪಾದಿಸಲಾಗಿದೆ. 1980 ರಲ್ಲಿ SLV-III ರೋಹಿಣಿ ಎಂಬ ಉಪಗ್ರಹವನ್ನು ಭೂಮಿಯ ಸಮೀಪ ಕಕ್ಷೆಗೆ ಯಶಸ್ವಿಯಾಗಿ ಬಿಡುಗಡೆ ಮಾಡಿತು , ಇದು ಭಾರತದ ಬಾಹ್ಯಾಕಾಶ ಕಾರ್ಯಕ್ರಮವನ್ನು ಅಂತರಾಷ್ಟ್ರೀಯ ಹಂತಕ್ಕೆ ಕೊಂಡೊಯ್ಯಿತು. ಪೋಲಾರ್ ಸ್ಯಾಟಲೈಟ್ ಲಾಂಚ್ ವೆಹಿಕಲ್ ಸೇರಿದಂತೆ ಇಸ್ರೋದಲ್ಲಿ ಉಡಾವಣಾ ವಾಹನ ತಂತ್ರಜ್ಞಾನಗಳ ಮತ್ತಷ್ಟು ಅಭಿವೃದ್ಧಿಯನ್ನುಕಲಾಂನೋಡಿಕೊಳ್ಳುತ್ತಿದ್ದರು.

"ತ್ವರಿತ ಸಂಗತಿಗಳು"

ಪೂರ್ಣವಾಗಿ:ಅವುಲ್ ಪಕೀರ್ ಜೈನುಲಬ್ದೀನ್ ಅಬ್ದುಲ್ ಕಲಾಂ

ಜನನ: ಅಕ್ಟೋಬರ್ 15, 1931, ರಾಮೇಶ್ವರಂ , ಭಾರತ

ಮರಣ: ಜುಲೈ 27, 2015, ಶಿಲ್ಲಾಂಗ್ (ವಯಸ್ಸು 83)

ಶೀರ್ಷಿಕೆ / ಕಛೇರಿ: ಅಧ್ಯಕ್ಷರು (2002–2007) , ಭಾರತ

ರಾಜಕೀಯ ಸಂಬಂಧ: ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ

"ಕ್ಷಿಪಣಿ ಕಾರ್ಯಕ್ರಮ"

1982ರಲ್ಲಿಡಿಆರ್ಡಿಒಗೆಮರುಸೇರ್ಪಡೆಯಾದ ನಂತರ, ಕಲಾಂ ಸಮಗ್ರ ಮಾರ್ಗದರ್ಶಿ ಕ್ಷಿಪಣಿ ಅಭಿವೃದ್ಧಿ ಕಾರ್ಯಕ್ರಮವನ್ನುಯೋಜಿಸಿದರು, ಇದು ಹಲವಾರು ಯಶಸ್ವಿ ಕ್ಷಿಪಣಿಗಳನ್ನು ಉತ್ಪಾದಿಸಿತು. ಅವುಗಳಲ್ಲಿ ಅಗ್ನಿ, ಭಾರತದ ಮೊದಲ ಮಧ್ಯಂತರ–ಶ್ರೇಣಿಯ ಬ್ಯಾಲಿಸ್ಟಿಕ್ ಕ್ಷಿಪಣಿ , ಇದು SLV-III ನ ಅಂಶಗಳನ್ನು ಒಳಗೊಂಡಿದೆ; ಇದನ್ನು ಮೊದಲು 1989 ರಲ್ಲಿ ಉಡಾವಣೆ ಮಾಡಲಾಯಿತು. ಮತ್ತೊಂದು ಯಶಸ್ಸು ಮೇಲ್ಮೈಯಿಂದ ಮೇಲ್ಮೈಗೆ ಯುದ್ಧತಂತ್ರದ ಕ್ಷಿಪಣಿ ಪೃಥ್ವಿ ಆಗಿತ್ತು.

ಚಂಡೀಗಢ. ಚಂಡೀಗಢದ ರಾಕ್ ಗಾರ್ಡನ್ನಲ್ಲಿರುವ ಪ್ರತಿಮೆಗಳು ಭಾರತದ ಚಂಡೀಗಢದಲ್ಲಿರುವ ಶಿಲ್ಪಕಲಾ ಉದ್ಯಾನವನ, ಇದನ್ನು ನೆಕ್ ಚಂದ್ ರಾಕ್ ಗಾರ್ಡನ್ ಎಂದೂ ಕರೆಯುತ್ತಾರೆ. ನೇಕ್ ಚಂದ್ ಸೈನಿ ಅವರು ಭಾರತೀಯ ಸ್ವಯಂ ಕಲಿಸಿದ ಕಲಾವಿದರಿಂದ ರಚಿಸಿದ್ದಾರೆ. ದಾರ್ಶನಿಕ ಕಲಾವಿದ, ಜಾನಪದ ಕಲಾವಿದ, ಪರಿಸರ ಕಲೆ ಬ್ರಿಟಾನಿಕಾ ರಸಪ್ರಶ್ನೆ ಭಾರತ ರಸಪ್ರಶ್ನೆ ಅನ್ವೇಷಿಸಿ ಪರಮಾಣು ಪರೀಕ್ಷೆಗಳು 1992 ರಿಂದ 1999 ರವರೆಗೆ ಕಲಾಂ ಅವರು ಭಾರತದ ರಕ್ಷಣಾ



ಸಚಿವರಿಗೆ ವೈಜ್ಞಾನಿಕ ಸಲಹೆಗಾರರಾಗಿದ್ದರು ಮತ್ತು ನಂತರ ಅವರು ಕ್ಯಾಬಿನೆಟ್ ಮಂತ್ರಿಯ ಶ್ರೇಣಿಯೊಂದಿಗೆ ಸರ್ಕಾರದ ಪ್ರಧಾನ ವೈಜ್ಞಾನಿಕ ಸಲಹೆಗಾರರಾಗಿ (1999–2001) ಸೇವೆ ಸಲ್ಲಿಸಿದರು . ಈ ಅವಧಿಯಲ್ಲಿ ಅವರು ಕ್ಷಿಪಣಿ ವ್ಯವಸ್ಥೆಗಳ ಸರ್ಕಾರದ ಆಯುಧೀಕರಣದಲ್ಲಿ ಪ್ರಮುಖ ಪಾತ್ರ ವಹಿಸಿದರು, ಭಾರತಕ್ಕೆ ಪರಮಾಣು ಸಾಮರ್ಥ್ಯಗಳನ್ನು ನೀಡಿದರು. 1998 ರಲ್ಲಿ ಅವರು ಪೋಖ್ರಾನ್–II ಸರಣಿಯ ಪರಮಾಣು ಪರೀಕ್ಷೆಗಳ ಮುಖ್ಯ ಸಂಯೋಜಕರಲ್ಲಿ ಒಬ್ಬರಾಗಿದ್ದರು , ಇದರಲ್ಲಿ ರಾಜಸ್ಥಾನ ರಾಜ್ಯದ ಪೋಖ್ರಾನ್ ಪಟ್ಟಣದ ಪರೀಕ್ಷಾ ವ್ಯಾಪ್ತಿಯಲ್ಲಿ ಐದು ಬಾಂಬ್ಗಳನ್ನು ಸ್ಫೋಟಿಸಲಾಯಿತು . ದೇಶದ ಪರಮಾಣು ಶಸ್ತ್ರಾಸ್ತ್ರಗಳ ಪರೀಕ್ಷೆಗಳಲ್ಲಿ ಅವರ ಪ್ರಮುಖ ಪಾತ್ರವು ಭಾರತವನ್ನು ಪರಮಾಣು ಶಕ್ತಿಯಾಗಿ ಗಟ್ಟಿಗೊಳಿಸಿತು ಮತ್ತು ಕಲಾಂ ಅವರನ್ನು ರಾಷ್ಟ್ರೀಯ ನಾಯಕನನ್ನಾಗಿ ಸ್ಥಾಪಿಸಿತು, ಆದರೂ ಪರೀಕ್ಷೆಗಳು ಅಂತರರಾಷ್ಟ್ರೀಯ ಸಮುದಾಯದಲ್ಲಿ ಹೆಚ್ಚಿನ ಕಳವಳವನ್ನು ಉಂಟುಮಾಡಿದವು . 1998 ರಲ್ಲಿ ಕಲಾಂ ಅವರು ದೇಶವ್ಯಾಪಿ ಯೋಜನೆಯನ್ನು ಮುಂದಿಟ್ಟರುಟೆಕ್ನಾಲಜಿ ವಿಷನ್ 2020, ಭಾರತವನ್ನು ಕಡಿಮೆ–ಅಭಿವೃದ್ಧಿ ಹೊಂದಿದ ಸಮಾಜದಿಂದ 20 ವರ್ಷಗಳಲ್ಲಿ ಅಭಿವೃದ್ಧಿ ಹೊಂದಿದ ಸಮಾಜಕ್ಕೆ ಪರಿವರ್ತಿಸುವ ಮಾರ್ಗಸೂಚಿ ಎಂದು ಅವರು ವಿವರಿಸಿದ್ದಾರೆ. ಇತರ ಕ್ರಮಗಳ ಪೈಕಿ, ಯೋಜನೆಯು ಕೃಷಿ ಉತ್ಪಾದಕತೆಯನ್ನು ಹೆಚ್ಚಿಸುವುದು, ಆರ್ಥಿಕ ಬೆಳವಣಿಗೆಯ ಸಾಧನವಾಗಿ ತಂತ್ರಜ್ಞಾನವನ್ನು ಒತ್ತಿಹೇಳುವುದು ಮತ್ತು ಆರೋಗ್ಯ ರಕ್ಷಣೆ ಮತ್ತು ಶಿಕ್ಷಣದ ಪ್ರವೇಶವನ್ನು ವಿಸ್ತರಿಸುವುದು.

"ಅಧ್ಯಕ್ಷತೆ"

ಎಪಿಜೆ ಅಬ್ದುಲ್ ಕಲಾಂ APJ ಅಬ್ದುಲ್ ಕಲಾಂ ಭಾರತದ "ಜನರ ರಾಷ್ಟ್ರಪತಿ," ಂಕಎ ಅಬ್ದುಲ್ ಕಲಾಂ, 2007. 2002 ರಲ್ಲಿ ಭಾರತದ ತೀರ್ಮನ್ಯಾಶನಲ್ ಡೆಮಾಕ್ರಟಿಕ್ ಅಲೈಯನ್ಸ್ (ಎನ್ಡಿಎ) ಕಲಾಂ ಅವರನ್ನು ಹೊರಹೋಗುವ ಅಧ್ಯಕ್ಷರ ಯಶಸ್ಸಿಗೆ ಮುಂದಾಯಿತು. ಕೊಚೆರಿಲ್ ರಾಮನ್ ನಾರಾಯಣನ್ ಕಲಾಂ ಅವರ ನಿಲುವು ಮತ್ತು ಜನಪ್ರಿಯ ಮನವಿ ಎಂದರೆ ಅವರು ಮುಸ್ಲಿಂ ಆಗಿದ್ದರೂ ಹಿಂದೂ ರಾಷ್ಟ್ರೀಯವಾದಿ (ಹಿಂದುತ್ವ) NDA ಯಿಂದ ನಾಮನಿರ್ದೇಶನಗೊಂಡರು ಮತ್ತು ಪ್ರಮುಖ ವಿರೋಧ ಪಕ್ಷವಾದ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ಕೂಡಅವರಉಮೇದುವಾರಿಕೆಯನ್ನು ಪ್ರಸ್ತಾಪಿಸಿತು. ಮಾಜಿ ಕ್ರಾಂತಿಕಾರಿ ನಾಯಕಿ ಲಕ್ಷ್ಮಿ ಸಾಹಗಲ್ ಅವರನ್ನು ಸೋಲಿಸುವ ಮೂಲಕ ಕಲಾಂ ಸುಲಭವಾಗಿ ಎಲೆಕ್ಟೋರಲ್ ಕಾಲೇಜಿನ ಮತವನ್ನು ಗೆದ್ದರು. ಅವರು ಜುಲೈ 2002 ರಲ್ಲಿ ಭಾರತದ 11 ನೇ ರಾಷ್ಟ್ರಪತಿಯಾಗಿ ಪ್ರಮಾಣವಚನ ಸ್ವೀಕರಿಸಿದರು, ಇದು ಬಹುಪಾಲು ವಿಧ್ಯುಕ್ತ ಹುದ್ದೆಯಾಗಿದೆ. ಅವರು 2007 ರಲ್ಲಿ ತಮ್ಮ ಅವಧಿಯ ಕೊನೆಯಲ್ಲಿ ಅಧಿಕಾರವನ್ನು ತೊರೆದರು ಮತ್ತು ದೇಶದ ಮೊದಲ ಮಹಿಳಾ ಅಧ್ಯಕ್ಷರಾದ ಪ್ರತಿಭಾ ಪಾಟೀಲ್ ಅವರು ಉತ್ತರಾಧಿಕಾರಿಯಾದರು.

"ಪರಂಪರೆ"

ನಾಗರಿಕ ಜೀವನಕ್ಕೆ ಮರಳಿದ ನಂತರ, ಭಾರತವನ್ನು ಅಭಿವೃದ್ಧಿ ಹೊಂದಿದ ದೇಶವಾಗಿ ಪರಿವರ್ತಿಸಲುವಿಜ್ಞಾನಮತ್ತುತಂತ್ರಜ್ಞಾನವನ್ನು ಬಳಸಲು ಕಲಾಂ ಬದ್ಧರ

ಮಹರ್ಷಿ ವಾಲ್ಮೀಕಿ ಜಯಂತಿ

ನವಲಗುಂದ : ಮಹರ್ಷಿ ವಾಲ್ಮೀಕಿಯು ಕವಿಕುಲದ ಗುರುವಾಗಿ ಹಲವಾರು ಕವಿಗಳಿಗೆ ಮತ್ತು ಸಾಹಿತಿಗಳಿಗೆ ಸ್ಫೂರ್ತಿಯ ಸೆಲೆಯಾಗಿದ್ದರು ವಾಲ್ಮೀಕಿಯವರಿಂದ ರಚನೆಯಾದ ರಾಮಾಯಣವು ಇಂದಿಗೂಮೌಲ್ಯಯುತವಾಗಿದೆಂದು ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಪ್ರಧಾನಗುರುಮಾತೆ ಆರ್ ಎನ್ ಹಾಲಿಗೇರಿ ಹೇಳಿದರು.

ಪಟ್ಟಣದ ಸರಕಾರ ಹಿರಿಯ ಪ್ರಾಥಮಿಕ ಹೆಣ್ಣುಮಕ್ಕಳು ಶಾಲೆ ನಂ 1ರಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳಿಗೆ ವಾಲ್ಮೀಕಿಯವರ ರಾಮಾಯಣವು ಉತ್ತಮ ಗ್ರಂಥವಾಗಿ ನಿಲ್ಲಬಲ್ಲದು ಎಂದರು.

ನಿವೃತ್ತ ಪ್ರಧಾನಗುರು ಎನ್ ಎನ್ ಹಾಲಿಗೇರಿ, ಶಿಕ್ಷಕರಾದ ಡಿ ಎಚ್ ಮಳಲಿ, ಎನ್ ಎಸ್ ತಾಳಿಕೋಟಿಮಠ, ಮಮತಾಜ ನದಾಫ್, ಅಡುಗೆ ಸಹಾಯಕಿಯರಾದ ಮಲ್ಲಮ್ಮ ಭೋವಿ, ಶಶಿಕಲಾ ಸವಣೂರ ಹಾಗೂ ವಿದ್ಯಾರ್ಥಿಗಳು ಇದ್ದರು.

ಸರ್ಕಾರದ ಕ್ರಮ ಖಂಡಿಸಿ ಪ್ರತಿಭಟನೆ

ಹುಬ್ಬಳ್ಳಿ : ಹಳೇ ಹುಬ್ಬಳ್ಳಿ ಗಲಭೆ ಪ್ರಕರಣ ವಾಪಸಾತಿ ಖಂಡಿಸಿ ಶ್ರೀರಾಮ ಸೇನಾ ಕಾರ್ಯಕರ್ತರು ನಗರದ ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆ ಬಳಿ ಪ್ರತಿಭಟನೆ ನಡೆಸಿದರು.

ಹಳೇ ಹುಬ್ಬಳ್ಳಿಯ ದೇವಸ್ಥಾನ, ಆಸ್ಪತ್ರೆ ಹಾಗೂ ಪೊಲೀಸ್ ಠಾಣೆಯ ಮೇಲೆ ದಾಳಿ ಮಾಡಿ, ಪೊಲೀಸರ ಮೇಲೆ ಹಲ್ಲೆ ಮಾಡಿರುವ ಪ್ರಕರಣವನ್ನು ವಾಪಾಸ್ ಪಡೆಯುತ್ತಿರುವ ನಡೆ ಸಮಂಜಸವಾದದ್ದು ಅಲ್ಲ. ಪ್ರಕರಣವನ್ನು ರಾಜ್ಯ ಸರ್ಕಾರ ಹಿಂಪಡೆಯಬಾರದು. ಒಂದು ವೇಳೆ ಮೊಕದ್ದಮೆ ಹಿಂಪಡೆದರೆ ಮುಂದಿನ ದಿನಗಳಲ್ಲಿ ಉಗ್ರವಾದ ಹೋರಾಟ ಮಾಡಲಾಗುವುದು ಎಂದು ಎಚ್ಚರಿಕೆ ನೀಡಲಾಯಿತು.

ಈ ಸಂದರ್ಭದಲ್ಲಿ ಶ್ರೀರಾಮ ಸೇನಾ ರಾಜ್ಯಾಧ್ಯಕ್ಷ ಗಂಗಾಧರ ಕುಲಕರ್ಣಿ, ಕಾರ್ಯಕರ್ತರಾದ ಅಪ್ಪಣ್ಣ ದಿವಟಗಿ, ಮಂಜು ಕಾಟಕರ್ ಮತ್ತಿತರರು ಉಪಸ್ಥಿತರಿದ್ದರು.

ಅದ್ದೂರಿಯಾಗಿ ನಾಡ ಹಬ್ಬ ರಾಜ್ಯೋತ್ಸವ ಆಚರಣೆ

ಧಾರವಾಡ : ಪ್ರತಿ ವರ್ಷದಂತೆ ನವೆಂಬರ್ 1 ರಂದು ರಾಜ್ಯೋತ್ಸವನ್ನು ಅದ್ದೂರಿಯಾಗಿ ಆಚರಿಸಲಾಗುವುದು. ಜಿಲ್ಲೆಯ ಎಲ್ಲ ಸರ್ಕಾರಿ ನೌಕರರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಕರ್ನಾಟಕ ರಾಜ್ಯೋತ್ಸವದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ರಾಜ್ಯೋತ್ಸವ ದಿನದಂದು ಶಾಲಾ-ಕಾಲೇಜು ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರು ರಾಷ್ಟ್ರೀಯ ಧ್ವಜಾರೋಹಣ ನೇರವೇರಿಸಿ, ಸಾರ್ವಜನಿಕರಿಗೆ ರಾಜ್ಯೋತ್ಸವದ ಸಂದೇಶ ನೀಡಲಿದ್ದಾರೆ ಎಂದು ಅವರು ಹೇಳಿದರು.

ನವೆಂಬರ್ 1 ರಂದು ಬೆಳಿಗ್ಗೆ 8.30 ಗಂಟೆಗೆ ಆರ್. ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಸಾರ್ವಜನಿಕರು ಮತ್ತು ಸರ್ಕಾರಿ ನೌಕರರು ಉಪಸ್ಥಿತರಿರಬೇಕು. 8.55 ಕ್ಕೆ ಮುಖ್ಯ ಅತಿಥಿಗಳಾಗಿರುವ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಕ್ರೀಡಾಂಗಣಕ್ಕೆ ಆಗಮಿಸುವರು. ನಂತರ ಅವರು ರಾಷ್ಟ್ರ ಧ್ವಜಾರೋಹಣ ನೇರವೇರಿಸಿ, ವಿವಿಧ ದಳಗಳ ವೀಕ್ಷಣೆ ಮಾಡುವರು. ನಂತರ ಸಚಿವರು ಜಿಲ್ಲೆಯ ಜನತೆಗೆ ಕರ್ನಾಟಕ ರಾಜ್ಯೋತ್ಸವದ ಸಂದೇಶ ನೀಡುವರು. ಮತ್ತು 9.30 ಗಂಟೆಗೆ ವಿವಿಧ ದಳಗಳಿಂದ ಗೌರವ ರಕ್ಷೆ ಸ್ವೀಕರಿಸುವರು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ರಾಜ್ಯೋತ್ಸವ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಮತ್ತು ವ್ಯವಸ್ಥಿತವಾಗಿ ಆಯೋಜಿಸಿ ಯಶಸ್ವಿಗೊಳಿಸಲು ವಿವಿಧ ಇಲಾಖೆಗಳಿಗೆ ಜವಾಬ್ದಾರಿಗಳನ್ನು ವಹಿಸಲಾಗಿದೆ. ಪ್ರತಿ ಇಲಾಖೆಯು ಪರಸ್ಪರ ಸಮನ್ವಯತೆಯಿಂದ ಕೆಲಸ ಮಾಡಬೇಕು. ಮತ್ತು ತಮ್ಮ ಇಲಾಖೆಗಳ ಪ್ರತಿಯೊಬ್ಬ ಅಧಿಕಾರಿ, ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವಂತೆ ಕ್ರಮಕೈಗೊಳ್ಳಬೇಕು ಎಂದು ಹೇಳಿದರು.

ರಾಜ್ಯೋತ್ಸವ ಕಾರ್ಯಕ್ರಮದ ಕವಾಯತ್ತು ಪ್ರದರ್ಶನದಲ್ಲಿ ಹಾಗೂ ಗೌರವ ರಕ್ಷೆ ನೀಡಲು ಆಯ್ಕೆಯಾಗುವ ದಳಗಳಿಗೆ ಅಕ್ಟೋಬರ್ 28 ರಿಂದ 30 ವರೆಗೆ ಆರ್.ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ತರಬೇತಿ ನೀಡಲಾಗುವುದು. ಉತ್ತಮ ತಂಡಗಳನ್ನು ಅಂತಿಮವಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನೇತೃತ್ವದ ಆಯ್ಕೆ ಸಮಿತಿಯಿಂದ ಆಯ್ಕೆ ಮಾಡಲಾಗುವುದು ಮತ್ತು ಉತ್ತಮ ಪ್ರದರ್ಶನ ನೀಡುವ ದಳಗಳಿಗೆ ಬಹುಮಾನ ಹಾಗೂ ಪ್ರಮಾಣ ಪತ್ರ ನೀಡಲಾಗುವುದುದೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಅಕ್ಟೋಬರ್ 31 ರಿಂದ ನವೆಂಬರ್ 2 ರವರೆಗೆ ಧಾರವಾಡ ಜಿಲ್ಲಾ ಕೇಂದ್ರದ ಎಲ್ಲ ಸರ್ಕಾರಿ ಕಟ್ಟಡಗಳು ಹಾಗೂ ಸಾರ್ವಜನಿಕ ಮುಖ್ಯ ವೃತ್ತಗಳಲ್ಲಿ ದೀಪಾಲಾಂಕಾರ ಮಾಡಬೇಕು. ರಾಜ್ಯೋತ್ಸವ ಕಾರ್ಯಕ್ರಮ ಸ್ಥಳದಲ್ಲಿ ಅಗತ್ಯ ಕುಡಿಯುವ ನೀರು, ಶೌಚಾಲಯ ಮತ್ತು ಭಾಗವಹಿಸುವ ವಿದ್ಯಾರ್ಥಿಗಳಿಗೆ ಅಲ್ಪೋಪಹಾರದ ವ್ಯವಸ್ಥೆಯನ್ನು ಸಂಬಂಧಪಟ್ಟ ಇಲಾಖೆಗಳು ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಚಿವರ ಸಂದೇಶಕ್ಕೆ ಮಾಹಿತಿ: ನವೆಂಬರ್ 01 ರಂದು ಜರುಗುವ ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ಜಿಲ್ಲಾ ಉಸ್ತುವಾರಿ ಸಚಿವರು ರಾಷ್ಟ್ರ ಧ್ವಜಾರೋಹಣದ ನಂತರ ಜಿಲ್ಲೆಯ ಸಾರ್ವಜನಿಕರಿಗೆ ರಾಜ್ಯೋತ್ಸವದ ಸಂದೇಶವನ್ನು ನೀಡುತ್ತಾರೆ. ಈ ಸಂದೇಶಕ್ಕೆ ಅಗತ್ಯವಿರುವ ವಿವಿಧ ಇಲಾಖೆಗಳಲ್ಲಿನ ಪ್ರಗತಿ ವರದಿಯನ್ನು ಆಯಾ ಇಲಾಖಾ ಮುಖ್ಯಸ್ಥರು ನಿಗದಿತ ದಿನಾಂಕದೊಳಗೆ ಸಲ್ಲಿಸಬೇಕು.

ಜಿಲ್ಲಾ ಮಟ್ಟದ ಅಧಿಕಾರಿಗಳು, ತಮ್ಮ ಇಲಾಖೆಯ ಯೋಜನೆಗಳಿಗೆ ಸಂಬಂಧಿಸಿದ, ಇದುವರೆಗೆ ಸಾಧಿಸಿದ ಗುರಿ, ಸಾಧನೆ ಕುರಿತು ಸಂಕ್ಷಿಪ್ತವಾಗಿ ಒಂದು ಪ್ಯಾರಾಗ್ರಾಫ್‌ನಲ್ಲಿ ನುಡಿ ತಂತ್ರಾಂಶದಲ್ಲಿ ಮಾಹಿತಿಯನ್ನು ಅಕ್ಟೋಬರ್ 21, 2024 ರ ಮಧ್ಯಾಹ್ನ 12 ಗಂಟೆಯೊಳಗೆ ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಧಾರವಾಡ ಇವರಿಗೆ (ಸಾಫ್ಟ್‌ಕಾಪಿ ಮತ್ತು ಹಾರ್ಡ್‌ಕಾಪಿ) ಸಲ್ಲಿಸಬೇಕು. ಸಾಫ್ಟ್‌ಕಾಪಿಯನ್ನು ಇ-ಮೇಲ್ varthabhavandwd74@gmail.com <mailto:varthabhavandwd74@gmail.com> ಗೆ ಕಳುಹಿಸಬೇಕು. ಮತ್ತು ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9538076619 ಗೆ ಸಂಪರ್ಕಿಸಬೇಕೆಂದು ಅವರು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಸ್ವಾಗತಿಸಿದರು. ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ. ಗೋಪಾಲ ಬ್ಯಾಕೋಡ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ ವೇದಿಕೆಯಲ್ಲಿ ಇದ್ದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಬಿ.ಎಸ್.ಮುಗನೂರಮಠ, ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ ಸಿದ್ದನಗೌಡರ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಚನ್ನಬಸಪ್ಪ ಕೊಡ್ಲಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ.ಶುಭ, ಕೈಗಾರಿಕೆ ಇಲಾಖೆಯ ಉಪನಿರ್ದೇಶಕ ಡಾ. ಎಂ.ಎನ್.ಭೀಮಪ್ಪ, ರಾಜ್ಯ ಪತ್ರಗಾರ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕಿ ಮಂಜುಳಾ ಯಲಿಗಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಹಾಗೂ ಲೋಕೋಪಯೋಗಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಅಗ್ನಿಶಾಮಕ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

ಆನ್‌ಲೈನ್ ಬೆಟ್ಟಿಂಗ್ ಆ್ಯಪ್ ನಿಷೇಧಕ್ಕೆ ಆಗ್ರಹಿಸಿ ಪ್ರತಿಭಟನೆ

ಹುಬ್ಬಳ್ಳಿ : ಯುವ ಸಮೂಹಕ್ಕೆ ಮಾರಕವಾಗಿರುವ ಆನ್‌ಲೈನ್ ಬೆಟ್ಟಿಂಗ್ ಆ್ಯಪ್‌ಗಳನ್ನು ಬಂದ್ ಮಾಡಬೇಕೆಂದು ಆಗ್ರಹಿಸಿ ನಮ್ಮ ಕರ್ನಾಟಕ ಸೇನೆ ವತಿಯಿಂದ ನಗರದಲ್ಲಿಂದು ಪ್ರತಿಭಟನೆ ನಡೆಸಲಾಯಿತು. ನಗರದ ಸಂಗೊಳ್ಳಿ ರಾಯಣ್ಣನ ವೃತ್ತದಿಂದ ತಹಶಿಲ್ದಾರ ಕಛೇರಿಯವರೆಗೆ ಪ್ರತಿಭಟನಾ ರ್ಯಾಲಿ ನಡೆಸಿದ ಪ್ರತಿಭಟನಾಕಾರರು ತಹಶಿಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ನಮ್ಮ ಕರ್ನಾಟಕ ಸೇನೆಯ ಉತ್ತರ ಕರ್ನಾಟಕ ಅಧ್ಯಕ್ಷರಾದ ಅಮೃತ ಇಜಾರಿ ಮಾತನಾಡಿ, ಆನ್‌ಲೈನ್ ಬೆಟ್ಟಿಂಗ್ ಜಾಲಕ್ಕೆ ಶಾಲಾ ವಿದ್ಯಾರ್ಥಿಗಳು, ಯುವಕರು ಸಿಕ್ಕು ತಮ್ಮ ಜೀವನ ಹಾಳು ಮಾಡಿಕೊಳ್ಳವ ದುಃಸ್ಥಿತಿ ನಿರ್ಮಾಣವಾಗಿದ್ದು, ಇದ-ರಿಂದ ಆತ್ಮಹತ್ಯೆಗೆ ಶರಣಾಗುತ್ತಿರುವ ಉದಾಹರಣೆಗಳು ಸಾಕಷ್ಟು ನಡೆದಿವೆ.

ದೇಶದ ಕೆಲ ರಾಜ್ಯಗಳಲ್ಲಿ ಬೆಟ್ಟಿಂಗ್ ಆನ್‌ಲೈನ್ ಆ್ಯಪ್‌ಗಳನ್ನು ನಿಷೇಧ ಮಾಡಲಾಗಿದ್ದು, ಇಂತಹ ಮಾರಕ ಆ್ಯಪ್‌ಗಳನ್ನು ರಾಜ್ಯ ಸರ್ಕಾರ ರಾಜ್ಯದಲ್ಲಿ ನಿಷೇಧ ಮಾಡಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಬಸವರಾಜ್ ದೇವರಮನಿ, ಮಹೇಶ ಪತ್ತಾರ, ಶೀತಲ ಮಲಗಾವಿ, ಸಿದ್ದು ಸಫಾರೆ, ಮನೋಹರ ಸಫಾರೆ, ಬಸವರಾಜ್ ಸಾಲಿ, ಹಿತೇಶ ರಾಠೋಡ್ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಹಿರಿಯರು ಸಮಾಜದ ಆಸ್ತಿ ಅವರನ್ನು ಗೌರವಿಸೋಣ

ಧಾರವಾಡ: ಕನ್ನಡ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನ, ಧಾರವಾಡದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದ್ದು ಕಾರ್ಯಕ್ರಮದ ಉದ್ಘಾಟನೆಯನ್ನು ಗೌರ ವಾನ್ವಿತ ಶ್ರೀ.ಪರಶುರಾಮ ದೊಡಮನಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಧಾರವಾಡ ಇವರು ನೇರವೇರಿಸದರು,

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀಮತಿ ಡಾ॥ ಹೆಚ್.ಹೆಚ್.ಕುಕನೂರ, ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಧಾರವಾಡ ಇವರು ವಹಿಸಿದ್ದರು ಹಾಗೂ ಮುಖ್ಯ ಅತಿಥಿಗಳಾಗಿ ಎಮ್.ಹೆಚ್ ಮುಂದಿನಮನಿ ಪೊಲೀಸ ಸಬ್ ಇನ್ಸ್‌ಪೆಕ್ಟರ್, ಡಿಎಸ್‌ಬಿ ವಿಭಾಗ ಎಸ್.ಪಿ ಆಫೀಸ್ ಧಾರವಾಡ, ಶ್ರೀ.ಜಗದೀಶ ಕೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾ ರಿಗಳು, ಧಾರವಾಡ, ಶ್ರೀ ಐ.ಕೆ.ಲಕ್ಕುಂಡಿ ವಿಶ್ವ ಧರ್ಮ ಮಹಿಳಾ ಮತ್ತು ಮಕ್ಕಳ ಸೇವಾ ಶ್ರಮ ಸಮಿತಿ ಹುಬ್ಬಳ್ಳಿ, ಶ್ರೀ. ಬಿ. ಎ. ಪಾಟೀಲ ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ಸರ್ಕಾರಿ ನೌಕರರ ಹಾಗೂ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘ(ರಿ) ಹುಬ್ಬಳ್ಳಿ, ಹಾಗೂ ಶ್ರೀ.ರುದ್ರಯ್ಯ ಎಂ ಚರಂತಿಮಠ ಅಧೀಕ್ಷಕ ರು, ವಿವೇಕಾನಂದ ವೃದ್ಧಾಶ್ರಮ, ನವನಗರ ಹಾಗೂ ಶ್ರೀಮತಿ.ಅನಿತಾ ಪಾಟೀಲ ಶಾರದಾ ವೃದ್ಧಾಶ್ರಮ, ಧಾರವಾಡ ಇವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶ್ರೀ.ಪರಶುರಾಮ ದೊಡಮನಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಕಾನೂನು ಸೇವೆಗಳ ಪ್ರಾಧಿಕಾರ ಧಾರವಾಡ ಇವರು ಮಾತ ನಾಡಿ ಹಿರಿಯ ನಾಗರಿಕರಿಗೆ ಇರುವ ಪ್ರಚಲಿತ ಕಾನೂನುಗಳ ಬಗ್ಗೆ ಅರಿವು ಮೂಡಿಸಿದರು. ಡಾ॥ಹೆಚ್.ಹೆಚ್ ಕುಕನೂರ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಧಾರವಾಡ ಇವರು ಮಾತನಾಡಿ ಹಿರಿಯರು ಸಮಾಜದ ಆಸ್ತಿ ಅವರನ್ನು ಗೌರವಿಸೋಣ ಎಂದು ತಿಳಿಸಿದರು. ಬಿ.ಎ ಪಾಟೀಲ್ ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ಸರ್ಕಾರಿ ನೌಕರರ ಹಾಗೂ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘ(ರಿ) ಹುಬ್ಬಳ್ಳಿರವರು ಮಾತನಾಡಿ ಹಿರಿಯ ನಾಗರಿಕರ ವಿವಿಧ ಸೌಲಭ್ಯಗಳನ್ನು ಸರ್ಕಾರ ನವೀಕರಿಸಬೇಕು ಈ ಕುರಿತು ಸಂಘದ ವತಿಯಿಂದ ನಾವು ಬೇಡಿಕೆ ಸಲ್ಲಿಸಿದ್ದೇವೆ ಎಂದು ತಿಳಿಸಿದರು.

ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತ ರಾದ ಹಿರಿಯ ನಾಗರಿಕರಿಗೆ ಬಹುಮಾ ನಗಳನ್ನು ವಿತರಿಸಲಾಯಿತು. ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹಿರಿಯ ಸಾಧಕರಿಗೆ ಸನ್ಮಾನಿಸಲಾಯಿತು.

ಶಿಸ್ತಿನ ಸಮಾಜ ಯಾವುದಾದರೂ ಇದ್ದರೆ ಅದು ಎಸ್‌ಎಸ್‌ಕೆ ಸಮಾಜ: ಕೆ.ಎಸ್. ಈಶ್ವರಪ್ಪ

ಗದಗ : ಭಾರತೀಯ ಸಂಸ್ಕೃತಿಗೆ ಉನ್ನತ ಸ್ಥಾನಮಾನವಿದೆ. ಹಿಂದೂ ಧರ್ಮವನ್ನು ಹಾಳು ಮಾಡಲಿಕ್ಕೆ ಯಾರಿಂದಲೂ ಸಾಧ್ಯವಿಲ್ಲ ಎಂದು ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಅವರು ಹೇಳಿದರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರಬಾರ ವೇದಿಕೆಯಲ್ಲಿ ಜರುಗಿದ "ನಮ್ಮೂರು ದಸರಾ-2024" ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿ, ಎಸ್‌ಎಸ್‌ಕೆ ಸಮಾಜದಲ್ಲಿ ವರದಕ್ಷಿಣೆ ರಹಿತ ಮದುವೆಗಳು ನಡೆಯುತ್ತಿರುವದು ಕೇಳಿ ತುಂಬಾ ಸಂತೋಷವಾಯಿತು. ಇದೇ ರೀತಿ ವರದಕ್ಷಣೆ ರಹಿತ ಮದುವೆಗಳನ್ನು ಮಾಡುವದನ್ನು ಇತರೆ ಸಮಾಜದವರು ಅಳವಡಿಸಿಕೊಳ್ಳಬೇಕೆಂದು ಸಲಹೆ ನೀಡಿದರು. ದಸರಾ ಹಬ್ಬದ ಸಂದರ್ಭದಲ್ಲಿ ಪ್ರತಿನಿತ್ಯ ಎಸ್.ಎಸ್.ಕೆ ಸಮಾಜದ ಮಹಿಳೆಯರು ಬೆಳಿಗ್ಗೆ ಎದ್ದು ದೇವಸ್ಥಾನಕ್ಕೆ ಆಗಮಿಸಿ ಜಗನ್ಮಾತೆಗೆ ವಿಶೇಷ ಪೂಜೆ ಸಲ್ಲಿಸಿ ಧನ್ಯರಾಗುತ್ತಿದ್ದಾರೆ. ಎಸ್.ಎಸ್.ಕೆ ಸಮಾಜದ ಬಾಂಧವರ ಶಿಸ್ತು, ಆಚರಣೆ, ಭಕ್ತಿ ನೋಡಿ ನನ್ನ ಕುಟುಂಬದವರನ್ನು ಕರೆದುಕೊಂಡು ಬರಬೇಕಿತ್ತು ಎಂದು ಅನಿಸುತ್ತಿದೆ. ಮುಂದಿನ ದಸರಾ ಹಬ್ಬದಲ್ಲಿ ಕುಟುಂಬ ಸಮೇತವಾಗಿ ಆಗಮಿಸಿ ದೇವಿಯ ದರ್ಶನ ಪಡೆಯುತ್ತೇನೆ ಎಂದು ಹೇಳಿದರು. ಇದಕ್ಕೂ ಮುಂಚೆ ಅವರು ಜಗದಂಬಾ ದೇವಿ ಹಾಗೂ ತುಳಜಾಭವಾನಿ ದೇವಿಯ ದರ್ಶನ ಪಡೆದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಎಸ್.ಎಸ್.ಕೆ ಸಮಾಜ ಪಂಚ ಕಮೀಟಿ ಅಧ್ಯಕ್ಷ ಫಕೀರಸಾ ಬಾಂಡಗೆ ಅವರು ವಹಿಸಿದ್ದರು. ವೇದಿಕೆ ಮೇಲೆ ಎಸ್.ಎಸ್. ಕೆ.ಸಮಾಜದ ಹಿರಿಯರು ಹಾಗೂ ಗಣ್ಯ ವ್ಯಾಪಾರಸ್ಥರಾದ ಬಾಬಾಸಾ ಬಾಕಳೆ, ಉದ್ಯಮಿ ಚಿದಾನಂದ ಕ್ಷತ್ರೀಯ, ಪಂಚ ಕಮೀಟಿಯ ಉಪಾಧ್ಯಕ್ಷ ರಾಜುಬದಿ, ಗೌರವ ಕಾರ್ಯದರ್ಶಿ ವಿನೋಧ ಶಿದ್ಲಿಂಗ, ಕಾರ್ಯ ದರ್ಶಿ ರವಿ ಶಿದ್ಲಿಂಗ, ದಸರಾ ಕಮೀಟಿಯ ಚೇರಮನ್‌ರಾದ ವಿಷ್ಣುಸಾ ಶಿದ್ಲಿಂಗ, ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಪಂಚ ಕಮೀಟಿಯ ಸದಸ್ಯರಾದ ಎನ್.ಆರ್.ಖಟ ವಟೆ, ವಿಶ್ವನಾಥಸಾ ಖ

ಮೈತ್ರಾದೇವಿ ಜಿಟ್ಟಿಯವರಿಗೆ ಸನ್ಮಾನ

ಚಿಮ್ಮಡ : ಇಲ್ಲಿನ ಸರಕಾರಿ ಪ್ರೌಢಶಾಲೆಯ ಪ್ರಭಾರ ಮುಖ್ಯೋಪಾಧ್ಯಾಯೆ ಶ್ರೀಮತಿ ಮೈತ್ರಾದೇವಿ ಜಟ್ಟಿಯವರ ಸನ್ಮಾನ ಕಾರ್ಯಕ್ರಮ ಬುಧವಾರದಂದು ನಡೆಯಿತು.

ಬೆಂಗಳೂರಿನ ಭಾರತರತ್ನ ಸರ್ ಎಂ. ವಿಶ್ವೇಶ್ವರಯ್ಯ ಇಂಜಿನೀಯರಿಂಗ್ ಪ್ರತಿಷ್ಠಾನ ಟ್ರಸ್ಟ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ ಕಾರ್ಯಕ್ರಮದಲ್ಲಿ "ರಾಷ್ಟ್ರೀಯ ಶಿಕ್ಷಣ ರತ್ನ ಪ್ರಶಸ್ತಿ" ಪಡೆದ ಪ್ರಯುಕ್ತ ಸರಕಾರಿ ಪ್ರೌಢ ಶಾಲೆಯ ಉಸ್ತುವಾರಿ ಸಮೀತಿಯಿಂದ ಸತ್ಕರಿಸಿ ಗೌರವಿಸಲಾಯಿತು. ಗ್ರಾ.ಪಂ. ಮಾಜಿ ಅಧ್ಯಕ್ಷ ಪ್ರಭು ನೇಸೂರ, ತಾ.ಪಂ. ಮಾಜಿ ಉಪಾಧ್ಯಕ್ಷ ಪ್ರಭು ಮುಧೋಳ, ಎಸ್.ಡಿ.ಎಂ.ಸಿ ಅಧ್ಯಕ್ಷ ಮಾರುತಿ ಮಮದಾಪೂರ, ಶಿಕ್ಷಕರಾದ ಎಂ.ಎಲ್. ಜಮಾದಾರ, ಎಚ್.ಬಿ. ಕರೋಶಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ರಾಮಾಯಣ ರಚನೆಯಲ್ಲಿ ಮಹರ್ಷಿ ವಾಲ್ಮೀಕಿ ಅಗ್ರಗಣ್ಯರು: ಉಪನ್ಯಾಸಕ ಬಿ.ಎಂ. ಕಬ್ಬೂರೆ

ಮೂಡಲಗಿ : ರಾಮಾಯಣ ಗ್ರಂಥ ರಚನೆಯಲ್ಲಿ ಮಹರ್ಷಿ ವಾಲ್ಮೀಕಿ ಅಗ್ರಗಣ್ಯನಾಗಿದ್ದು ಒಬ್ಬ ದರೋಡೆಕೊರನಾಗಿದ್ದ ರತ್ನಾಕರ ಮಹರ್ಷಿ ವಾಲ್ಮೀಕಿಯಾಗಿ ನಾರದಮುನಿಗಳ ಸಂದೇಶದಂತೆ ಪರಿವರ್ತನೆಯಾಗಿ ಮಾನವ ಕುಲದಲ್ಲಿ ಶ್ರೇಷ್ಠತೆಯ ಮೌಲ್ಯಗಳನ್ನು ಹೊಂದಿರುವ ರಾಮನ ಜೀವನದ ಯಶೋಗಾಥೆಯನ್ನು ಪರಿಚಯಸುವಲ್ಲಿ ಮಹತ್ವದ ಪಾತ್ರ ವಹಿಸಿದರು ಎಂದು ಮೂಡಲಗಿಯ ಆರ್‌ಡಿಎಸ್ ಪದವಿ ಕಾಲೇಜಿನ ಇತಿಹಾಸ ಉಪನ್ಯಾಸಕ ಬಿ.ಎಂ. ಕಬ್ಬೂರೆ ಹೇಳಿದರು.

ಪಟ್ಟಣದ ಆರ್.ಡಿ.ಎಸ್. ಕಲಾ,ವಾಣಿಜ್ಯ, ವಿಜ್ಞಾನ, ಸಮಾಜಕಾರ್ಯ ಪದವಿ ಮಹಾವಿದ್ಯಾಲಯ, ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯಗಳ ಸ್ಕೌಟ್ಸ್ ಎನ್.ಎಸ್.ಎಸ್. ಘಟಕಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಮಹರ್ಷಿ ವಾಲ್ಮೀಕಿ ಜಯಂತಿಯಲ್ಲಿ ಅತಿಥಿಗಳಾಗಿ ಮಾತನಾಡಿದರು. ರಾಮನಾಮದಲ್ಲಿ ದೇವನಿದ್ದು ಸಾರ್ವಕಾಲಿಕ ಸಾಮಾಜಿಕ ಮೌಲ್ಯಗಳನ್ನು ರಾಮಾಯಣದ 24000 ಶ್ಲೋಕಗಳಲ್ಲಿ ಪರಿಚಯಸುವಲ್ಲಿ ಮಹರ್ಷಿ ವಾಲ್ಮೀಕಿ ಮನುಕುಲದ ಮಹಾನ್ ವಿದ್ವಾಂಸರಾಗಿದ್ದಾರೆ ಎಂದರು.

ಉಪನ್ಯಾಸಕಿ ಶೃತಿ ಹಂಜಿ ಮಾತನಾಡಿ ಪಿತೃವಾಕ್ಯ ಪರಿಪಾಲಕನಾಗಿ ಸತ್ಯ ಮತ್ತು ಧರ್ಮದ ಮೂಲಕ ರಾಜ್ಯವನ್ನು ಆಳ್ವಿಕೆ ಮಾಡಿ ಮಾನವಕುಲದಲ್ಲಿ ಸರ್ವಶ್ರೇಷ್ಠತೆಯ ವಿಚಾರಗಳನ್ನು ಪ್ರತಿಪಾಧಿಸಿದ ರಾಮನ ಜೀವನದ ತಿರಳನ್ನು ಹೊಂದಿರುವ ರಾಮಾಯಣ ಎಂಬ ಗ್ರಂಥವನ್ನು ರಚಿಸಿ ಮಾನವಕುಲದ ಸೈದಾಂತಿಕ ವಿಚಾರದಾರೆಗಳನ್ನು ಅರ್ಥೈಸಿಕೊಡುವಲ್ಲಿ ಮಹರ್ಷಿ ವಾಲ್ಮೀಕಿಯವರ ಜ್ಞಾನದ ಚಿಂತನೆಯನ್ನು ತಿಳಿಸಿಕೊಡುತ್ತದೆ

ಉಪನ್ಯಾಸಕ ಡಾ. ಪ್ರಶಾಂತ ಮಾವರಕರ ಮಾತನಾಡಿದರು. ಪ್ರಾಚಾರ್ಯ ಎಸ್.ಬಿ.ಗೋಟೂರೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಶಿವಾನಂದ ಸತ್ತಿಗೇರಿ, ಸಂಜೀವ ವಾಲಿ, ಸಂಗಮೇಶ ಕುಂಬಾರ, ಗಂಗಾಧರ ಮನ್ನಾಪೂರ, ಸಂತೋಷ ಲಟ್ಟಿ, ಹಣಮಂತ ಚಿಕ್ಕೋಡಿ, ಸುಭಾಸ ಮಾಲೋಜಿ, ಉಮೇಶ ಪುಟ್ಟಿ ಮತ್ತಿತರರು ಹಾಜರಿದ್ದರು.

ವಿದ್ಯಾರ್ಥಿನಿ ಸೌಜನ್ಯ ಮೂಡಲಗಿ ನಿರೂಪಿಸಿದರು ವಿದ್ಯಾರ್ಥಿನಿ ಸುಕನ್ಯಾ ಬೋಳಿ ಸ್ವಾಗತಿಸಿದರು. ವಿದ್ಯಾರ್ಥಿನಿ ರುಕ್ಮಿಣಿ ಮೆಕಳಿ ವಂದಿಸಿದರು.

ನೇಕಾರ ಪಾದಯಾತ್ರೆಗೆ ಗ್ರಾಮಸ್ಥರ ಬೆಂಬಲ

ಚಿಮ್ಮಡ : ನೇಕಾರರಿಗೆ ಅವಶ್ಯವಿರುವ ಸೌಲಭ್ಯಗಳನ್ನು ದೊರಕಿಸುವಂತೆ ಆಗ್ರಹಿಸಿ ಬನಹಟ್ಟಿಯಿಂದ ಹುಬ್ಬಳ್ಳಿಯವರೆಗೆ ಹಮ್ಮಿಕೊಳ್ಳಲಾಗಿರುವ ಪಾದಯಾತ್ರೆಗೆ ಗ್ರಾಮದ ನೇಕಾರರು ಬೆಂಬಲ ಸೂಚಿಸಿದ್ದಾರೆ.

ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘದ ರಾಜ್ಯಾಧ್ಯಕ್ಷ ಶಿವಲಿಂಗ ಟಿರಕಿಯವರ ನೇತ್ರತ್ವದಲ್ಲಿ ನಡೆದ ಪಾದಯಾತ್ರೆ ಗ್ರಾಮದ ಮಾರ್ಗವಾಗಿ ಸಂಚರಿಸಿದಾಗ ಅವರಿಗೆ ಅಲ್ಪೋಪಹಾರ ನೀಡುವ ಮೂಕಲ ಹಾಗೂ ಪಾದಯಾತ್ರೆಯಲ್ಲಿ ಜೊತೆಯಾಗುವ ಮೂಲಕ ಬೆಂಬಲ ಸೂಚಿಸಿದರು. ನೇಕಾರ ಮುಖಂಡರಾದ ರಾಜೇಂದ್ರ ಮಿರ್ಜಿ, ಮಲ್ಲಪ್ಪ ಮಿರ್ಜಿ,

ಸಂಗಪ್ಪ ಹಳ್ಳೂರ, ಮಹಾಲಿಂಗಪ್ಪಾ ಜಿಡ್ಡಿಮನಿ, ಗ್ರಾ.ಪಂ. ಸದಸ್ಯ ಅಶೋಕ ಮೋಟಗಿ, ಮಹಾದೇವ ಅಥಣಿ, ಪ್ರಕಾಶ ಕರಡಿ,

ಸುನೀಲ ಅಥಣಿ ಸೇರಿದಂತೆ ಹಲವಾರು ಜನ ನೇಕಾರರು ಉಪಸ್ಥಿತರಿದ್ದರು.

ಬೆಂಬಲ ಘೋಷನೆ ಕಡಾಡಿ ಸ್ವಾಗತ

ಮೂಡಲಗಿ : ರೈತರ ಪರಿಶ್ರಮಕ್ಕೆ ತಕ್ಕಂತೆ ಅವರಿಗೆ ಪ್ರತಿಫಲ ಒದಗಿಸಲು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸಚಿವ ಸಂಪುಟವು ಹಿಂಗಾರು ಹಂಗಾಮಿನ ಆರು ಬೆಳೆಗಳ ಕನಿಷ್ಠ ಬೆಂಬಲ ಬೆಲೆಗಳನ್ನು ಪ್ರತಿ ಕ್ವಿಂಟಾಲ್ ಗೆ ರೂ.130 ರಿಂದ 300ರ ವರೆಗೆ ಏರಿಕೆ ಮಾಡಿರುವ ಕೇಂದ್ರ ಸರ್ಕಾರದ ನಿರ್ಣಯವನ್ನು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಕೇಂದ್ರ ಸರ್ಕಾರದ ಕ್ರಮವನ್ನು ಸ್ವಾಗತಿಸಿದ್ದಾರೆ.

ಗುರುವಾರ ಪತ್ರಿಕಾ ಹೇಳಿಕೆ ನೀಡಿದ ಸಂಸದ ಈರಣ್ಣ ಕಡಾಡಿ ಅವರು ಕೇಂದ್ರ ಸರ್ಕಾರವು ರೈತರಿಗೆ ಅವರ ಉತ್ಪನ್ನಗಳಿಗೆ ಲಾಭದಾಯಕ ದರವನ್ನು ಖಾತ್ರಿಪಡಿಸುವುದಕ್ಕಾಗಿ 2025–26 ಸಾಲಿನ ಹಿಂಗಾರು ಬೆಳೆಗಳ ಕನಿಷ್ಠ ಬೆಂಬಲ ಬೆಲೆವನ್ನು ಹೆಚ್ಚಿಸಿದೆ. ಕನಿಷ್ಠ ಬೆಂಬಲ ಬೆಲೆಯಲ್ಲಿ ಗರಿಷ್ಠ ಹೆಚ್ಚಳವಾಗಿ ರಾಪ್ಸೀಡ್ ಮತ್ತು ಸಾಸಿವೆ ಪ್ರತಿ ಕ್ವಿಂಟಾಲಿಗೆ 300 ರೂ. ಹಾಗೂ ಮಸೂರ ಬೇಳೆಗೆ ಪ್ರತಿ ಕ್ವಿಂಟಾಲಿಗೆ 275 ರೂ. ಹೆಚ್ಚಿಸಲಾಗಿದೆ. ಗೋದಿ –ರೂ.150, ಬಾರ್ಲಿ – ರೂ.130, ಕಡಲೆ – ರೂ.210, ಸೂರ್ಯಕಾಂತಿ – ರೂ.140 ಪ್ರತಿ ಕ್ವಿಂಟಾಲಿಗೆ ಹೆಚ್ಚಿಸಿ ದೀಪಾವಳಿಗೂ ಮುನ್ನ ರೈತರಿಗೆ ಬಂಪರ್ ಕೊಡುಗೆ ನೀಡಿದೆ ಎಂದರು.

ಮುಂಗಾರು ಹಂಗಾಮಿನ 14 ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಏರಿಕೆ ಮಾಡಲಾಗಿದೆ. ಹಿಂಗಾರು ಹಂಗಾಮಿಗೆ 6 ಬೆಳೆಗಳಿಗೆ ಹೊಸ ಕನಿಷ್ಠ ಬೆಂಬಲ ಬೆಲೆ ಘೋಷಿಸಲಾಗಿದೆ. ಯೂರಿಯಾ ಹೊರತಾದ ರಸಗೊಬ್ಬರಗಳ ಸಬ್ಸಿಡಿಗೆ 24,475 ಕೋಟಿ ರೂ. ವಿನಿಯೋಗಿಸುವ ಪ್ರಸ್ತಾಪಕ್ಕೆ ಒಪ್ಪಿಗೆ ನೀಡಲಾಗಿದೆ. ಅನ್ನದಾತರ ಆದಾಯ ಹೆಚ್ಚಿಸಲು ಸದಾ ಬದ್ಧತೆ ತೋರಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ನಾಡಿನ ಅನ್ನದಾತರ ಪರವಾಗಿ ಧನ್ಯವಾದಗಳನ್ನು ತಿಳಿಸುವುದಾಗಿ ಸಂಸದ ಈರಣ್ಣ ಕಡಾಡಿ ತಿಳಿಸಿದ್ದಾರೆ.

ಸಂಸದರ ಕಾರ್ಯಾಲಯದಲ್ಲಿ ವಾಲ್ಮಿಕಿ ಜಯಂತಿ

ಮೂಡಲಗಿ : ಮಹರ್ಷಿ ವಾಲ್ಮೀಕಿಯವರ ಪವಿತ್ರ ಗ್ರಂಥ ರಾಮಾಯಣದ ಮೂಲಕ ಪ್ರಭು ಶ್ರೀರಾಮನ ವ್ಯಕ್ತಿತ್ವ, ಆದರ್ಶ, ಮೌಲ್ಯಗಳನ್ನು ಸಮಸ್ತ ಮಾನವಕುಲಕ್ಕೆ ಸಾರಿದ ಸಂದೇಶ ಇಂದಿಗೂ ಪ್ರಸ್ತುತವಾಗಿದೆ ಎಂದು ಬಸವರಾಜ ಕಡಾಡಿ ಅವರು ಹೇಳಿದರು.

ಕಲ್ಲೋಳಿ ಪಟ್ಟಣದ ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರ ಜನಸಂಪರ್ಕ ಕಾರ್ಯಾಲಯದಲ್ಲಿ ಮಹರ್ಷಿ ವಾಲ್ಮೀಕಿಯವರ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚಣೆ ಮಾಡಿ ಭಕ್ತಿಪೂರ್ವ ನಮನ ಸಲ್ಲಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಹಣಮಂತ ಕಲಕುಟ್ರಿ, ಸೋಮಲಿಂಗ ಹಡಗಿನಾಳ, ಸಂಸದರ ಆಪ್ತ ಕಾರ್ಯದರ್ಶಿ ಸಂತೋಷ ಬಡಿಗೇರ, ಬಿ.ಆರ್. ಪಾಟೀಲ, ಬಸವರಾಜ ಸಪಾಡ್ಲ, ಶಂಕರ ಖಾನಗೌಡ್ರ, ರಮೇಶ ಕವಟಕೊಪ್ಪ, ತುಕಾರಾಮ ಬಡಿಗೇರ ಚಂದ್ರಶೇಖರ ಲಟ್ಟಿ, ವಿನಾಯಕ ಘೋರ್ಪಡೆ, ಶಿವಾನಂದ ಗೌರಾಣಿ ಸೇರಿದಂತೆ ಅನೇಕ ಕಾರ್ಯಕರ್ತರು ಉಪಸ್ಥಿತರಿದ್ದರು.

ಜನರಲ್ಲಿ ಜಾಗೃತಿ ಮೂಡಿಸುವುದು ಅಗತ್ಯ: ನ್ಯಾ. ಸಿ. ಚಂದ್ರಶೇಖರ್

ಕೊಪ್ಪಳ : ಸಾರ್ವಜನಿಕರ ಅನುಕೂಲಗಳಿಗಾಗಿ ರೂಪಿಸಿರುವ ಸರ್ಕಾರದ ಯೋಜನೆಗಳ ಸಮರ್ಪಕ ಅನುಷ್ಠಾನ ಮಾಡಿ ಇದರ ಸದುಪಯೋಗ ಮಾಡಿಕೊಳ್ಳಲು ಜನರಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಕೊಪ್ಪಳ ಕಾನೂನು ಸೇವೆಗಳ ಪ್ರಾಧಿಕಾರ ದ ಅಧ್ಯಕ್ಷ ಹಾಗೂ ಜಿಲ್ಲಾ ಸತ್ರ ನ್ಯಾಯಾಧೀಶರಾದ ಸಿ, ಚಂದ್ರಶೇಖರ್ ರವರು ಹೇಳಿದರು, ಅವರು ತಾಲೂಕಿನ ಕಿನ್ನಾಳ ಗ್ರಾಮದ ದೇವಾಂಗ ಮಠದ ಕಲ್ಯಾಣ ಮಂಟಪ ದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ ಆಯುಷ್ಮಾನ್ ಭಾರತ, ಕರ್ನಾಟಕ ಆರೋಗ್ಯ ಅರಿವು ಮೂಡಿಸುವ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಜನರ ಆರೋಗ್ಯದ ಹಿತದೃಷ್ಟಿಯಿಂದ ಅನುಕೂಲ ದೊರಕಿಸಿಕೊಡಲು ಸರ್ಕಾರದ ಆಯುಷ್ಮಾನ್ ಭಾರತ ಮತ್ತು ಕರ್ನಾಟಕದ ಆರೋಗ್ಯ ಕಾರ್ಯಕ್ರಮಗಳು ಜಾರಿಗೊಂಡಿದ್ದು ಜನರು ಇದರ ಸದುಪಯೋಗ ಪಡೆದುಕೊಳ್ಳಬೇಕು ವಿವಿಧ ಸಂಘಟನೆಗಳು ಇಂಥ ಕಾರ್ಯಕ್ರಮಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಜಿಲ್ಲಾ ಸತ್ರ ಮತ್ತು ನ್ಯಾಯಾಧೀಶರಾದ ಸಿ ಚಂದ್ರಶೇಖರ್ ಅವರು ಅಭಿಪ್ರಾಯ ಪಟ್ಟರು,

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯಾಗಿರುವ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹಾಂತೇಶ್ ಎಸ್ ದರ್ಗದ್ ರವರು ಕಾರ್ಯಕ್ರಮದ ಬಗ್ಗೆ ಪ್ರಾಸ್ತಾವಿಕವಾಗಿ ಮಾತನಾಡಿದರು,ಮತ್ತು ಆಯುಷ್ಮಾನ್ ಭಾರತ ಹಾಗೂ ಕರ್ನಾಟಕ ಆರೋಗ್ಯ ಸಂಯೋಜ–ಕರಾದ ಡಾ, ಶೃತಿ ರವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು, ಕಿನ್ನಾಳ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಕರಿಯಮ್ಮ ಉಪ್ಪಾರ್ ಅಧ್ಯಕ್ಷತೆ ವಹಿಸಿದ್ದರು ವೇದಿಕೆ ಮೇಲೆ ಉಪಾಧ್ಯಕ್ಷರಾದ ದುರ್ಗಪ್ಪ ರಾಮಪ್ಪ ಡಠಬರ್ ಕಿನ್ನಾಳ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪರಮೇಶ್ವರಯ್ಯ ತೆಳಗಡೆ ಮಠ, ಆಧಾರ್ ಕಾರ್ಡ್ ಸಂಯೋಜಕ ಜಾಫರ್ ಸೇರಿದಂತೆ ಗ್ರಾಮ ಪಂಚಾಯತ್ ಸದಸ್ಯರಾದ ಹನುಮೇಶ್ ಕೊವಿ, ಕಾಳಪ್ಪ ಬಿದನೂರ್ ಮಂಜುನಾಥ್ ಕುರುಬರ, ಮೈಲಾರಪ್ಪ ಉದ್ದರಾ , ಸಣ್ಣಪ್ಪ ಕಾರ ಬ್ಯಾಳಿ, ಪ್ರಶಾಂತ್ ಕುಲಕರ್ಣಿ,ಉಪಸ್ಥಿತರಿದ್ದು ಸೌಲಭ್ಯದ ಬಗ್ಗೆ ನೋಂದಣಿ ತಿದ್ದುಪಡಿ ಇತ್ಯಾದಿ ವಿಷಯದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ಜರುಗಿತು ಅಂಗನವಾಡಿ ಮತ್ತು ಆಶಾ ಕಾರ್ಯಕರ್ತರು ಸೇರಿದಂತೆ ಗ್ರಾಮದ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಅರ್ಜಿ ಆಹ್ವಾನ

ವಿಜಯಪುರ : ಪೋ–ಕ್ಸೋ ಕಾಯ್ದೆಯಡಿ ಸಂತ್ರಸ್ತ ಮಕ್ಕಳಿಗೆ ಬೆಂಬಲ ವ್ಯಕ್ತಿಗಳಿಗಾಗಿ ಸೇವೆ ಸಲ್ಲಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಮಕ್ಕಳೊಂದಿಗೆ ಕೆಲಸ ಮಾಡುವಲ್ಲಿ ಕನಿಷ್ಠ 3 ವರ್ಷಗಳ ಅನುಭವದೊಂದಿಗೆ ಸಮಾಜ ಕಾರ್ಯ ವಿಷಯದಲ್ಲಿ ಸ್ನಾತಕೋತ್ತರ ಪದವಿ ಅಥವಾ ಮನೋಶಾಸ್ತ್ರ ವಿಷಯದಲ್ಲಿ ಪದವಿಯನ್ನು ಹೊಂದಿರಬೇಕು. ಪ್ರತಿ ಪ್ರಕರಣ–ಕ್ಕೆ ರೂ.3000/– ಸಂಭಾವನೆ ನಿಗದಿಗೊಳಿಸಲಾಗಿದೆ.

ಮಕ್ಕಳ ಆರೈಕೆ ಕೇಂದ್ರದಲ್ಲಿ ಮಕ್ಕಳೊಂದಿಗೆ ಕೆಲಸ ಮಾಡುವ ಅಧಿಕಾರಿಗಳು ಮತ್ತು ಮಕ್ಕಳ ಹಕ್ಕುಗಳ ಕ್ಷೇತ್ರದಲ್ಲಿ ಕೆಲಸ ಮಾಡುವ ಯಾವುದೇ ಸಂಸ್ಥೆ ಕೂಡ ಅರ್ಜಿ ಸಲ್ಲಿಸಬಹುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಕ್ಷೇತ್ರ ಕಾರ್ಯವನ್ನು ಮಾಡಲು ಮತ್ತು ಅಪರಾಧ ನ್ಯಾಯ ವ್ಯವಸ್ಥೆಯ ಮೂಲಕ ಮಕ್ಕಳು ಮತ್ತು ಅವರ ಕುಟುಂಬಗಳಿಗೆ ಸಹಾಯ ಮಾಡಲು ತರಭೇತಿ ನೀಡಲಾಗುತ್ತದೆ.

ಅರ್ಜಿ ನಮೂನೆಗಳನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಪಡೆದುಕೊಂದು ಅಗತ್ಯ ದಾಖಲಾತಿಗಳೊಂದಿಗೆ ದಿನಾ ಂಕ 29–10–2024ರ ಸಂಜೆ 5.30 ರೊಳಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬಿ4/3, ಬಿ.ಎಮ್. ಪಾಟೀಲ್ ಶಾಲೆ ಹತ್ತಿರ, ವಿವೇಕ ನಗರ ವಿಜಯಪುರ ಇಲ್ಲಿಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 08352–295261 ಸಂಪರ್ಕಿಸಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಪ್ರಕಟಣೆ ತಿಳಿಸಿದೆ.

ಶರಣ ಬಸವೇಶ್ವರರ ಪುರಾಣ ಪ್ರಾರಂಭೋತ್ಸವ ಧರ್ಮ ಅನುಸರಣೆಯಿಂದ ಜೀವನ ಪಾವನ: ನಾವದಗಿ ಶ್ರೀ ಅಭಿಮತ

ತಾಳಿಕೋಟೆ : ಮನುಷ್ಯನ ಬದುಕು ಸಾರ್ಥಕತೆ ಪಡೆಯಬೇಕಾದರೆ ಬದುಕಿನಲ್ಲಿ ಧಾರ್ಮಿಕ ಮೌಲ್ಯಗಳನ್ನು ಅಳವಡಿಸಿಕೊಳ್ಳ ಬೇಕು. ಒಂಬತ್ತು ದಿನಗಳ ಕಾಲ ಇಲ್ಲಿ ನಡೆಯುವ ಪುರಾಣದ ಮೂಲಕ ಧರ್ಮದ ಗಾಳಿ ಬೀಸಲಿದೆ ಅದರ ಸದುಪಯೋಗವನ್ನು ಮಾಡಿಕೊಳ್ಳಿ ಎಂದು ನಾವದಗಿ ಬ್ರಹನ್ಮಠದ ರಾಜಗುರು ಶ್ರೀ ರಾಜೇಂದ್ರ ಒಡೆಯರ್ ಶಿವಾಚಾರ್ಯರು ಹೇಳಿದರು. ತಾಲೂಕಿನ ಕಾರಗನೂರ ಗ್ರಾಮದಲ್ಲಿ ಲಿಂ.ವೇ. ಮೂ.ಮಲ್ಲಿಕಾರ್ಜುನ ಸ್ವಾಮಿಗಳ ಗದ್ದುಗೆ ಪ್ರತಿಷ್ಠಾಪನದ ಅಂಗವಾಗಿ ಹಮ್ಮಿಕೊಂಡ ಕಲಬುರ್ಗಿ ಶ್ರೀ ಶರಣ ಬಸವೇಶ್ವರ ಪುರಾಣ ಆರಂಭೋತ್ಸವ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು ಲಿಂಗೈಕ್ಯ ಮಲ್ಲಿಕಾರ್ಜುನ ಸ್ವಾಮಿಗಳು ಶುದ್ಧ ಮನಸ್ಸಿನವರಾಗಿದ್ದು ಹಲವಾರು ಧಾರ್ಮಿಕ ಕಾರ್ಯಕ್ರಮಗಳನ್ನು ಈ ಮಠದಲ್ಲಿ ನಡೆಸಲು ಬಯಸಿದ್ದರು ಆದರೆ ಅವರಿಗೆ ಸಾಧ್ಯವಾಗಿರಲಿಲ್ಲ ಇದೀಗ ಆ ಸಂದರ್ಭ ನಿಮಗೆ ಒದಗಿ ಬಂದಿದೆ ಈ ಧರ್ಮ ಸೇವೆಯಲ್ಲಿ ನೀವೆಲ್ಲರೂ ಒಂದಾಗಿ ತನು ಮನ ಧನದಿಂದ ಸಹಕರಿಸಿ ಯಶಸ್ವಿಗೊಳಿಸಿ ಎಂದು ತಿಳಿದರು. ಕೊಡಗಾನೂರದ ಪೂಜ್ಯಶ್ರೀ ಕುಮಾರ ದೇವರು ಮಾತನಾಡಿ ಧರ್ಮದ ಕಾರ್ಯ ಯಾರೇ ಮಾಡಲಿ ಎಲ್ಲೇ ಮಾಡಲಿ ಅದರಲ್ಲಿ ಭಾಗವಹಿಸಿ ಪುಣ್ಯ ಪಡೆದುಕೊಳ್ಳಿ ಎಂದರು. ತಾಳಿಕೋಟೆ ಶ್ರೀ ಖಾಸ್ಗತೇಶ್ವರ ಸಂಗೀತ ಶಾಲೆಯ ಗಾಯಕ ದೀಪಕಸಿಂಗ್ ಹಜೇರಿ ಹಾಗೂ ತಬಲಾವಾದಕ ಎಲ್ಲಪ್ಪ ಗುಂಡಳ್ಳಿ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಪುರಾಣಿಕ ವೇ. ಮೂ.ರಮೇಶ ಶರಣರು.ಕಾರಗನೂರ ಹಿರೇಮಠದ ಮುಖ್ಯಸ್ಥರು ಗ್ರಾಮದ ಗುರು ಹಿರಿಯರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

ಜಿಲ್ಲಾ ಮಟ್ಟದ ಕುಸ್ತಿ ಪಂದ್ಯಾವಳಿಯಲ್ಲಿ

ಬಾಗಲಕೋಟ : ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಕುಸ್ತಿ ಪಂದ್ಯಾಟ ಸ್ಪರ್ಧೆಯಲ್ಲಿ ಮಾದರಿಯ ಪ್ರೌಢಶಾಲೆಯ ವಿದ್ಯಾರ್ಥಿ ಕುಮಾರ್ ಮೃತ್ಯುಂಜಯ ಪಂಚಾಕ್ಷರಿ ಮಠ ವಿದ್ಯಾರ್ಥಿ ಝುರಿ